

MAG(2)PRB/CR/165/2022-23 Title code: KARKAN27951

# ಮುಂಜಾನೆ ವಾರ್ತೆ

ಇ–ಪೇಪರ್: www.munjanevarthe.com

EDITOR: H.L.AMARANATH

MUNJANE VARTHE

ಸಂಪಾದಕ: ಹೆಚ್.ಎಲ್ ಅಮರನಾಥ್ ಕನ್ನಡ ದಿನಪತ್ರಿಕೆ

VOLUME : 2 ISSUE: 133 ಸಂಪುಟ: 02 ಸಂಚಿಕೆ: 133 ಪುಟಗಳು: 04 munjanevarthe 27 THURSDAY JUNE 2024 27 ಗುರುವಾರ ಜೂನ್ 2024 ₹ 2



ಜಾಹೀರಾತಿಗಾಗಿ ಸಂಪರ್ಕಿಸಿ

9663122276

www.munjanevarthe.com


ಸರ್ಕಾರ ಯಾವುದೇ ಟ್ಯಾಕ್ಸ್ ಹಾಕದೇ ಅಭಿವೃದ್ಧಿ ಮಾಡಲು ಸಾಧ್ಯವಿಲ್ಲ ವಿವರಪುಟ 02

ಸಾರ್ವಜನಿಕರ ದೂರು ಅಹವಾಲುಗಳನ್ನು ಸ್ವೀಕಾರ ಮಾಡಿ ವಿವರಪುಟ 03

ಬಿಜೆಪಿ-ಜೆಡಿಎಸ್ ಮೈತ್ರಿ ಮೈತ್ರಿಕೂಟದ ಸಂಸದ ಸ್ಥಾನದ ಅಭ್ಯರ್ಥಿಯಾಗಿದ್ದ ಎಸ್.ಬಾಲರಾಜು ವಿವರಪುಟ 04

# ಸಂಸತ್ತಿನಲ್ಲಿ ರಾಹುಲ್ ಮೋದಿ ಪರಸ್ಪರ ಹಸ್ತಲಾಘವ



ನವದೆಹಲಿ: 18ನೇ ಲೋಕಸಭಾ ಸ್ಪೀಕರ್ ಆಗಿ ಓಂ ಬಿರ್ಲಾ ಆಯ್ಕೆಯಾಗಿದ್ದು, ಸತತ ಎರಡನೇ ಬಾರಿಗೆ ಸ್ಪೀಕರ್ ಹುದ್ದೆಗೆ ಏರಿದ್ದಾರೆ. ನೂತನ ಸಭಾಧ್ಯಕ್ಷರನ್ನು ಸ್ವಾಗತಿಸುವ ವೇಳೆ ಪ್ರಧಾನಿ ನರೇಂದ್ರ ಮೋದಿ ಹಾಗೂ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಮುಖಾಮುಖಿಯಾಗಿ ಪರಸ್ಪರ ಹಸ್ತಲಾಘವ ಮಾಡಿದ್ದಾರೆ. ಮೋದಿ ಹಾಗೂ ರಾಹುಲ್ ಗಾಂಧಿ ಪರಸ್ಪರ ಕೈ ಕುಲುಕಿಕೊಂಡು ಗಮನ ಸೆಳೆದಿದ್ದಾರೆ. ಇದರ ವಿಡಿಯೋ ಸಾಮಾಜಿಕ ಜಾಲತಾಣದಲ್ಲಿ ಹರಿದಾಡುತ್ತಿದೆ. ಪ್ರಧಾನಿ ನರೇಂದ್ರ ಮೋದಿ ಅವರು ಓಂ ಬಿರ್ಲಾ ಅವರನ್ನು ಸ್ಪೀಕರ್ ಆಗಿ ಆಯ್ಕೆ ಮಾಡುವ ಪ್ರಸ್ತಾವವನ್ನು ಮಂಡಿಸಿದರು. ಇದನ್ನು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅನುಮೋದಿಸಿದರು. ಸತತ ಎರಡನೇ ಬಾರಿಗೆ ಸ್ಪೀಕರ್ ಆದ ಓಂ ಬಿರ್ಲಾ ಅವರಿಗೆ ಇಡೀ ಸದನದ ಪರವಾಗಿ ಮೋದಿ ಅಭಿನಂದನೆ ಸಲ್ಲಿಸಿದರು.

## ಅಧಿವೇಶನ ಉದ್ದೇಶಿಸಿ ರಾಷ್ಟ್ರಪತಿ ದ್ರೌಪದಿ ಮುರ್ಮು ಭಾಷಣ



ನವದೆಹಲಿ: ರಾಷ್ಟ್ರಪತಿ ದ್ರೌಪದಿ ಮುರ್ಮು (ಗುರುವಾರ) 18ನೇ ಸಂಸತ್ತಿನ ಜಂಟಿ ಅಧಿವೇಶನವನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ಅವರ ಭಾಷಣದ ಸಮಯದಲ್ಲಿ, ಅವರು ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಹೊಸದಾಗಿ ಚುನಾಯಿತ ಸರ್ಕಾರದ ಆದ್ಯತೆಗಳನ್ನು ವಿವರಿಸುವ ನಿರೀಕ್ಷೆಯಿದೆ. 18ನೇ ಲೋಕಸಭೆಯ ಸಂವಿಧಾನದ ನಂತರ ಸಂಸತ್ತಿನ ಜಂಟಿ ಅಧಿವೇಶನವನ್ನು ಉದ್ದೇಶಿಸಿ ರಾಷ್ಟ್ರಪತಿಗಳ ಭಾಷಣವು ಅವರ ಮೊದಲನೆಯದಾಗಿದೆ.

18ನೇ ಲೋಕಸಭೆಯ ಚೊಚ್ಚಲ ಅಧಿವೇಶನ ಸೋಮವಾರ (ಜೂನ್ 24) ಆರಂಭಗೊಂಡಿದ್ದು, ರಾಜ್ಯಸಭೆಯ 264ನೇ ಅಧಿವೇಶನ ಜೂನ್ 27ರಂದು ಆರಂಭವಾಗಲಿದೆ. ಭಾಷಣ ಮಾಡುವ ದಿನವಾದ ರಾಷ್ಟ್ರಪತಿಗಳು ಮೆರವಣಿಗೆಯಲ್ಲಿ ಸಂಸತ್ತಿಗೆ ಆಗಮಿಸಲಿದ್ದಾರೆ.

## ಜೂ.28ರಂದು ರಾಜ್ಯದ ಎಲ್ಲಾ ಜಿಲ್ಲಾಧಿಕಾರಿ ಕಚೇರಿಗಳಿಗೆ ಬಿಜೆಪಿ ಮುತ್ತಿಗೆ



ಬೆಂಗಳೂರು/ನವದೆಹಲಿ: ವಾಲ್ಮೀಕಿ ಅಭಿವೃದ್ಧಿ ನಿಗಮದ 187 ಕೋಟಿ ರೂ. ಹಗರಣ ಸಂಬಂಧ ಹಣಕಾಸು ಸಚಿವರಾದ ಮುಖ್ಯಮಂತ್ರಿ ಜವಾಬ್ದಾರಿ ಹೊರಬೇಕು. ಈ ಸಂಬಂಧ ಶರಣಪ್ರಕಾಶ್ ಪಾಟೀಲ್, ನಿಗಮದ ಅಧ್ಯಕ್ಷರು ಕೂಡಲೇ ರಾಜೀನಾಮೆ ನೀಡಬೇಕು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ.ವಿಜಯೇಂದ್ರ ಆಗ್ರಹಿಸಿದರು. ದೆಹಲಿಯಲ್ಲಿ ಮಾಧ್ಯಮಗೋಷ್ಠಿಯಲ್ಲಿ ಮಾತನಾಡಿದ ಅವರು, ಇದೇ (ಜೂನ್) 28ರಂದು ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಜಿಲ್ಲಾಧಿಕಾರಿ ಕಚೇರಿಗೆ ಮುತ್ತಿಗೆ ಹಾಕಲಿದ್ದೇವೆ. ಪರಿಶಿಷ್ಟ ಪಂಗಡಕ್ಕೆ ಮೀಸಲಿಟ್ಟ ಹಣ ದುರ್ಬಳಕೆಯಾಗಿದೆ. ಕಾಂಗ್ರೆಸ್ ಸರ್ಕಾರ ಈ ಹಣ ದೋಚಿದೆ ಎಂದು ಆರೋಪಿಸಿದರು.

## ಪ್ರಜ್ವಲ್ ರೇವಣ್ಣ ಜಾಮೀನು ಅರ್ಜಿ ವಜಾ



ಹಾಸನ ಮಾಜಿ ಸಂಸದ ಪ್ರಜ್ವಲ್ ರೇವಣ್ಣಗೆ ಕಾನೂನು ಹೋರಾಟದಲ್ಲಿ ಹಿನ್ನಡೆಯಾಗಿದೆ. ಜಾಮೀನು ಅರ್ಜಿಯನ್ನು ವಜಾಗೊಳಿಸಲಾಗಿದ್ದು, ಸದ್ಯ ಪ್ರಜ್ವಲ್ ರೇವಣ್ಣ ಎಸ್‌ಐಟಿ ವಶದಲ್ಲಿದ್ದಾರೆ. ಬೆಂಗಳೂರಿನ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯದ ನ್ಯಾಯಾಧೀಶ ಗಜಾನನ ಭಟ್ ಬುಧವಾರ ಪ್ರಜ್ವಲ್ ರೇವಣ್ಣ ಜಾಮೀನು ಅರ್ಜಿಯನ್ನು ವಜಾಗೊಳಿಸಿದ್ದಾರೆ. ಅವರ ವಿರುದ್ಧ ಒಟ್ಟು 4 ಪ್ರಕರಣ ದಾಖಲಾಗಿದ್ದು, 1 ಪ್ರಕರಣದಲ್ಲಿ ಜಾಮೀನು ಸಿಕ್ಕಿದೆ. ಪ್ರಜ್ವಲ್ ರೇವಣ್ಣಗೆ ಮನೆಯ ಊಟ ಮಾಡಲು ಅವಕಾಶ ನೀಡಬೇಕು ಎಂದು ಕೋರ್ಟ್‌ಗೆ ಅರ್ಜಿ ಸಲ್ಲಿಕೆ ಮಾಡಲಾಗಿತ್ತು. ಮಂಗಳವಾರ ಈ ಅರ್ಜಿ ವಿಚಾರಣೆ ನಡೆದಿದ್ದು, ಸಿಐಡಿ ಇದಕ್ಕೆ ಆಕ್ಷೇಪ ವ್ಯಕ್ತಪಡಿಸಿತ್ತು. ಸಿಐಡಿ ಅಧಿಕಾರಿಗಳಿಗೆ ನೀಡುವ ಊಟವನ್ನೇ ಅವರಿಗೆ ನೀಡಲಾಗುತ್ತದೆ ಎಂದು ಹೇಳಿತ್ತು. ಕೋರ್ಟ್ ಪ್ರಜ್ವಲ್ ರೇವಣ್ಣಗೆ ಮನೆಯ ಊಟ ಕೊಡಲು ಅವಕಾಶ ನೀಡಿರಲಿಲ್ಲ. ಬುಧವಾರ ಅವರ ಜಾಮೀನು ಅರ್ಜಿ ವಜಾಗೊಳಿಸಲಾಗಿದ್ದು, ಪ್ರಜ್ವಲ್ ಎಸ್‌ಐಟಿ ಕಸ್ಟಡಿಯಲ್ಲಿ ವಿಚಾರಣೆ ಎದುರಿಸುವುದು ಅನಿವಾರ್ಯವಾಗಿದೆ.

## ನೆರಳಂತೆ ಕಾಯುವೆ, ನೋವು, ನಲಿವಿನಲ್ಲಿ ಜೊತೆಯಾಗಿರುವೆ!

ಬಾಗಿಲಿಗೆ ಬಂತು ಸರ್ಕಾರ, ಸೇವೆಗೆ ಇರಲಿ ಸಹಕಾರ" ಬೃಹತ್ ಜನಸ್ಪಂದನ ಕಾರ್ಯಕ್ರಮದಲ್ಲಿ ಇಂದು ಅಹವಾಲು ಸಲ್ಲಿಸಿದವರ ಪರ ನಿಂತು ಪರಿಹಾರ ಕೊಡಿಸುವ ಕಾಯಕ ನಮ್ಮದು. ನಮ್ಮ ಪ್ರತಿ ಹೆಜ್ಜೆಯೂ ಜನರ ಹಿತಕ್ಕಾಗಿ ಮುಡಿಪಾಗಿದ್ದು, ಇದು ನಮ್ಮ ಸರ್ಕಾರದ ಬದ್ಧತೆ.



## ಕೆಂಪೇಗೌಡ ಜಯಂತಿ ಆಹ್ವಾನ ಪತ್ರಿಕೆಯಲ್ಲಿ ಹೆಚ್.ಡಿ.ದೇವೇಗೌಡ ಕುಮಾರಸ್ವಾಮಿ ಹೆಸರು ಕೈ ಬಿಟ್ಟ ರಾಜ್ಯ ಸರ್ಕಾರ!

ನಾಡಪ್ರಭು ಕೆಂಪೇಗೌಡರ 515ನೇ ಜಯಂತಿ ಕಾರ್ಯಕ್ರಮವನ್ನ ರಾಜ್ಯ ಸರ್ಕಾರ ಆಚರಿಸುತ್ತಿರುವುದು ಸಂತೋಷದ ವಿಚಾರ. ಆದರೆ ಈ ಕಾರ್ಯಕ್ರಮಕ್ಕೆ ಒಕ್ಕಲಿಗ ಸಮುದಾಯದ ಹಿರಿಯ ನಾಯಕರಾದ ಮಾಜಿ ಪ್ರಧಾನಮಂತ್ರಿ, ರಾಜ್ಯಸಭಾ ಸದಸ್ಯ ಹೆಚ್‌ಡಿ ದೇವೇಗೌಡರು ಹಾಗೂ ರಾಜ್ಯದ ಮಾಜಿ ಮುಖ್ಯಮಂತ್ರಿ, ಕೇಂದ್ರ ಸಚಿವ ಹೆಚ್?ಡಿ ಕುಮಾರಸ್ವಾಮಿಯವರನ್ನ ಕಾರ್ಯಕ್ರಮಕ್ಕೆ ಆಹ್ವಾನಿಸದೆ ಇರುವುದು ಒಕ್ಕಲಿಗ ಸಮುದಾಯಕ್ಕೆ ಮಾಡಿದ ಅವಮಾನವಾಗಿದೆ. ಸರ್ಕಾರದ ಈ ಧೋರಣೆಯನ್ನ ಒಕ್ಕಲಿಗರ ಸಮುದಾಯ ಮತ್ತು ರಾಜ್ಯ ಒಕ್ಕಲಿಗರ ಸಂಘವು ತೀವ್ರವಾಗಿ ಖಂಡಿಸುತ್ತದೆ ಎಂದು ಹೇಳಿಕೆ ಬಿಡುಗಡೆ ಮಾಡಿದೆ.

ಕುಮಾರಸ್ವಾಮಿ ಹೇಳಿದ್ದೇನು?: ಕೆಂಪೇಗೌಡ ಜಯಂತಿ ಆಹ್ವಾನ ಪತ್ರಿಕೆಯಲ್ಲಿ ದೇವೇಗೌಡರು ಹಾಗೂ ತಮ್ಮ ಹೆಸರನ್ನು ಕೈಬಿಟ್ಟಿರುವ ವಿಚಾರವಾಗಿ ಪ್ರತಿಕ್ರಿಯಿಸಿ ಹೆಚ್‌ಡಿ ಕುಮಾರಸ್ವಾಮಿ, ನಾಡಪ್ರಭು ಕೆಂಪೇಗೌಡರು ಯಾರ ಸ್ವತ್ತು ಅಲ್ಲ, ಅವರು ಕನ್ನಡದ ಸ್ವತ್ತು. ಸರ್ಕಾರದ ಕಾರ್ಯಕ್ರಮದಲ್ಲಿ ದೇವೇಗೌಡರು, ನನ್ನ ಹೆಸರು ಹಾಕಿಲ್ಲ. ಆದರೆ ನಾನು ಈ ವಿಚಾರಕ್ಕೆ ಬಹಳ ಮಹತ್ವ ಕೊಡುವುದಿಲ್ಲ. ನಾನು ಯಾವಾಗಲೂ ಸಹ ಯಾವುದೇ ಕಾರ್ಯಕ್ರದಲ್ಲೂ ನನ್ನ ಹೆಸರು ಹಾಕಿಲ್ಲ ಅಂತ ಆರೋಪಿಸುವವನಲ್ಲ ಎಂದು ತಿರುಗೇಟು ಕೊಟ್ಟಿದ್ದಾರೆ. ನಾನು ಎರಡು ಬಾರಿ ರಾಜ್ಯದ ಮುಖ್ಯಮಂತ್ರಿ ಆದಾಗಲೂ ಬೆಂಗಳೂರಿಗೆ ಕೊಡುಗೆ ಕೊಟ್ಟಿದ್ದೇನೆ. ನಾನು ಕೆಂಪೇಗೌಡರಿಗೆ ಯಾವ ರೀತಿ ಗೌರವ ಸಲ್ಲಿಸಬೇಕು ಅದನ್ನ ಮಾಡುತ್ತೇನೆ. ಇವತ್ತು ನನ್ನ ಹೆಸರು ಹಾಕಿದ್ದರೂ ನಾಳೆ ನಾನು ಹೋಗೋಕೆ ಆಗುತ್ತಾ? ನಾಳೆ ರಾಷ್ಟ್ರಪತಿಗಳು ಜಂಟಿ ಭಾಷಣ ಮಾಡುತ್ತಾರೆ. ಹೀಗಾಗಿ ನಾನು ಇಲ್ಲಿ ಇರಬೇಕು. ಕಾರ್ಯಕ್ರಮಕ್ಕೆ ಹೋಗುವುದ ಸಾಧ್ಯವಾಗುವುದಿಲ್ಲ. ಅದಕ್ಕೆ ನಾನು ಇಲ್ಲೇ ಗೌರವ ಸಲಿಸುತ್ತೇನೆ ಎಂದು ಸರ್ಕಾರಕ್ಕೆ ತಿರುಗೇಟು ನೀಡಿದ್ದಾರೆ.

## ಡೆಂಘೀ ನಿಯಂತ್ರಿಸಲು ಮನೆ–ಮನೆ ಸಮೀಕ್ಷೆ



ಬೆಂಗಳೂರು: ನಗರದಲ್ಲಿ ಡೆಂಘೀ ಹರಡುವಿಕೆಯನ್ನು ತಡೆಯುವ ಸಲುವಾಗಿ ಮನೆ–ಮನೆ ಸಮೀಕ್ಷೆ ನಡೆಸಿ ನಾಗರಿಕರಲ್ಲಿ ಜಾಗೃತಿ ಮೂಡಿಸಲಾಗುತ್ತಿದೆ ಎಂದು ಪಾಲಿಕೆ ಮುಖ್ಯ ಆಯುಕ್ತ ತುಷಾರ್ ಗಿರಿನಾಥ್ ತಿಳಿಸಿದ್ದಾರೆ. ಬಿಬಿಎಂಪಿ ವ್ಯಾಪ್ತಿಯಲ್ಲಿ ಡೆಂಘೀ ಪ್ರಕರಣ ನಿಯಂತ್ರಿಸುವ ಸಂಬಂಧ ಬುಧವಾರ ಪಾಲಿಕೆ ಕೇಂದ್ರ ಕಚೇರಿ ಸಭಾಂಗಣ– 1ರಲ್ಲಿ ನಡೆದ ಸಭೆಯ ಬಳಿಕ ಅವರು ಮಾಧ್ಯಮದವರೊಂದಿಗೆ ಮಾತನಾಡಿದರು. ಆಯಾ ವಲಯ ವ್ಯಾಪ್ತಿಯಲ್ಲಿ ಆರೋಗ್ಯ ಪರಿವೀಕ್ಷರು, ಆಶಾ ಕಾರ್ಯಕರ್ತೆಯರು, ಎಎನ್‌ಎಂಗಳು ಹಾಗೂ ಲಿಂಕ್ ವರ್ಕರ್ಸ್‌ಗಳು ಸೇರಿದಂತೆ 1000 ಮನೆಗಳಿಗೊಂದು ಬ್ಲಾಕ್ ಅನ್ನು ರಚಿಸಿಕೊಳ್ಳಬೇಕು. ನಂತರ ಲಾರ್ವಾ ಇರುವ ತಾಣಗಳನ್ನು ಗುರುತಿಸುವುದು, ನಾಗರಿಕರಲ್ಲಿ ಅರಿವು ಮೂಡಿಸುವುದು.

ಪುಟ 2ಕ್ಕೆ

## ಡಿಸಿಎಂ ಹುದ್ದೆಗೆ ಡಿ.ಕೆ.ಶಿವಕುಮಾರ್ ರಾಜೀನಾಮೆ?

2024ರ ಲೋಕಸಭೆ ಚುನಾವಣೆ ನಂತರ ಕರ್ನಾಟಕದ ಕಾಂಗ್ರೆಸ್ ಒಳಗೆ ಕಿಚ್ಚು ಹೊತ್ತಿ, ತಿಕ್ಕಾಟ ಶುರುವಾಗಿದೆ ಅಂತಿದ್ದಾರೆ ಬಿಜೆಪಿ ನಾಯಕರು. ಇದಕ್ಕೆ ಪೂರಕವಾಗಿ ಕಾಂಗ್ರೆಸ್ ಒಳಗೆ ಈಗ



ಡಿಸಿಎಂ ಸ್ಥಾನಕ್ಕೆ ಪೈಪೋಟಿ ಜೋರಾಗಿ, ಒಂದೇ ಒಂದು ಉಪಮುಖ್ಯಮಂತ್ರಿ ಸ್ಥಾನ ಅಲ್ಲ ಹಲವು ಡಿಸಿಎಂ ಸ್ಥಾನ ಬೇಕೆಬೇಕು ಅಂತಾ ಕಾಂಗ್ರೆಸ್‌ನ ನಾಯಕರು ಹಠ ಹಿಡಿದಿದ್ದಾರೆ. ಈ ಸಮಯದಲ್ಲಿ ಡಿಸಿಎಂ ಹುದ್ದೆಗೆ ಡಿ.ಕೆ. ಶಿವಕುಮಾರ್ ರಾಜೀನಾಮೆ ನೀಡುತ್ತಾರಾ? ಎಂಬ ಸಂಚಲನ ಸೃಷ್ಟಿಯಾಗಿದೆ. ಕರ್ನಾಟಕದ ರಾಜಕೀಯ ವಲಯದಲ್ಲಿ ಸುಳ್ಳು ಸುದ್ದಿ ಹಾಗೂ ವದಂತಿಗೆ ಕಡಿಮೆ ಏನು ಇಲ್ಲ. ಅದೇ ರೀತಿ ಈಗ ಮತ್ತೊಂದು ಸುದ್ದಿ ತಲ್ಲಣ ಸೃಷ್ಟಿ ಮಾಡಿದೆ. ಅದು ಏನಪ್ಪ ಅಂದ್ರೆ, ಉಪಮುಖ್ಯಮಂತ್ರಿ ಸ್ಥಾನಕ್ಕೆ ಡಿ.ಕೆ. ಶಿವಕುಮಾರ್ ಅವರು ರಾಜೀನಾಮೆ ನೀಡಿ ಪಕ್ಷದಲ್ಲಿರುವ ವಿರೋಧಿಗಳಿಗೆ ಉತ್ತರ ನೀಡುತ್ತಾರೆ ಎಂಬುದು.

ಆದ್ರೆ ಈ ಮಾತನ್ನ ಈಗ ಕಾಂಗ್ರೆಸ್ ನಾಯಕರು ಅಲ್ಲಗಳೆದಿದ್ದು ಅಂತಹ ಯಾವುದೇ ಬೆಳವಣಿಗೆ ಇಲ್ಲ ಎಂದಿದ್ದಾರೆ. ಹಾಗಾದ್ರೆ ರಾಜ್ಯದಲ್ಲಿ ಇನ್ನೂ ಹಲವರಿಗೆ ಡಿಸಿಎಂ ಸ್ಥಾನ ಸಿಗುತ್ತಾ? ಈಗಿನ ಪರಿಸ್ಥಿತಿ ನೋಡಿದರೆ, ಕಾಂಗ್ರೆಸ್ ಕೇಂದ್ರ ನಾಯಕರು ಕರ್ನಾಟಕದಲ್ಲಿ ಮತ್ತಷ್ಟು ಡಿಸಿಎಂ ಹುದ್ದೆ ಸೃಷ್ಟಿಸುವುದು ಅಸಾಧ್ಯ ಎನ್ನಲಾಗುತ್ತಿದೆ. ಯಾಕಂದ್ರೆ ಈಗಿನ ಪರಿಸ್ಥಿತಿ ನೋಡುವುದಾದ್ರೆ ಪಕ್ಷದಲ್ಲಿ ಒಗ್ಗಟ್ಟು ಛಿದ್ರವಾಗುವ ಭಯ ಕಾಡುತ್ತಿದೆ.

ಅದರಲ್ಲೂ ಈ ಸಮಯದಲ್ಲೇ ಬಿಬಿಎಂಪಿ ಚುನಾವಣೆ ಕೂಡ ಎದುರಾಗುವ ಎಲ್ಲಾ ಲಕ್ಷಣ ಕಾಣುತ್ತಿದೆ. ಹೀಗಾಗಿ ರಾಜ್ಯದಲ್ಲಿ ಡಿಸಿಎಂ ಹುದ್ದೆ ವಿಭಜನೆ ಅಥವಾ ಮತ್ತಷ್ಟು ಉಪಮುಖ್ಯಮಂತ್ರಿ ಸ್ಥಾನ ಸೃಷ್ಟಿ ಅಸಾಧ್ಯ ಎಂಬ ಮಾತುಗಳು ಕೇಳಿಬರುತ್ತಿವೆ.





ಜಗತ್ತಿನ ಯಾವುದೇ ಮೂಲೆಯಲ್ಲಿ ಕುಳಿತು ಮುಂಜಾನೆವಾರ್ತೆ ಓದಿ...

www.munjanevarthe.com

ಮುಂಜಾನೆ ವಾರ್ತೆ ಕನ್ನಡ ದಿನಪತ್ರಿಕೆ ಓದುಗುವುದು ಈಗ ಮತ್ತಷ್ಟು ಸುಲಭ

ಮುಂಜಾನೆ ವಾರ್ತೆ
ಕನ್ನಡ ದಿನಪತ್ರಿಕೆ
ಇ-ಪೇಪರ್: www.munjanevarth.com
ಗುರುವಾರ 27 ಜೂನ್ 2024
THURSDAY 27 June 2024

# ಯುವ ಸಮುದಾಯವನ್ನು ಹಾಳು ಮಾಡುತ್ತಿರುವ ಮಾದಕ ದ್ರವ್ಯ

ಬೆಂಗಳೂರು: "ಯುವ ಸಮುದಾಯವನ್ನು ಹಾಳು ಮಾಡುತ್ತಿರುವ ಮಾದಕ ದ್ರವ್ಯ ವಿಶ್ವಕ್ಕೆ ಆಧುನಿಕ ಪಿಡುಗು" ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್? ಹೇಳಿದರು. ಅಂತಾರಾಷ್ಟ್ರೀಯ ಮಾದಕ ವಸ್ತು ವ್ಯಸನ ಮತ್ತು ಕಳ್ಳ ಸಾಗಾಣಿಕೆ ವಿರೋಧಿ ದಿನದ ಪ್ರಯುಕ್ತ ನಗರದ ಕಂಠೀರವ ಕ್ರೀಡಾಂಗಣದಲ್ಲಿ ರಾಜ್ಯ ಪೊಲೀಸ್ ಇಲಾಖೆ, ವಿವಿಧ ಶಿಕ್ಷಣ ಸಂಸ್ಥೆಗಳೊಂದಿಗೆ ಜಂಟಿಯಾಗಿ ಆಯೋಜಿಸಿದ್ದ ಕಾರ್ಯಕ್ರಮವನ್ನು ಉದ್ದೇಶಿಸಿ ಅವರು ಮಾತನಾಡಿದರು.

"ಮಾದಕ ವಸ್ತುಗಳ ವ್ಯಸನದ ಸಮಸ್ಯೆಯನ್ನು ಅರ್ಥೈಸಿಕೊಂಡ ವಿಶ್ವಸಂಸ್ಥೆ 1987ರಲ್ಲಿ ಮಾದಕ ವಸ್ತು ವಿರೋಧಿ ದಿನವನ್ನು ಜೂನ್ 26ರಂದು ಆಚರಿಸಲು ನಿರ್ಣಯಿಸಿತು. ಮಾದಕ ಪದಾರ್ಥಗಳು ಸಮಾಜಕ್ಕೆ ದೊಡ್ಡ ರೋಗವಾಗಿ ಅಂಟಿಕೊಳ್ಳುತ್ತಿದ್ದು, ಯುವ ಪೀಳಿಗೆ ಸಂಕಷ್ಟಕ್ಕೆ ಸಿಲುಕದಂತೆ ಜಾಗೃತಿ ಮೂಡಿಸಬೇಕಿದೆ. ಭಾರತವು ಸಹ ಮಾದಕ ವಸ್ತುಗಳ ಸಮಸ್ಯೆಯಲ್ಲಿ ಸಿಲುಕಿದ್ದು, 5 ಕೋಟಿ ಜನ ಮಾದಕ ವ್ಯಸನಕ್ಕೆ ಅಂಟಿಕೊಂಡಿದ್ದಾರೆ. ಯುವಕರು ಹಾಳಾದರೆ, ದೇಶ ಸಂಕಷ್ಟಕ್ಕೆ ಸಿಲುಕಿದಂತಾಗುತ್ತದೆ. ಭಾರತ ಅತಿ ಹೆಚ್ಚು



ಯುವಕರನ್ನು ಹೊಂದಿರುವ ದೇಶ. ಬಹಳ ಎಚ್ಚರಿಕೆಯಿಂದ ದೇಶದ ಮುಂದಿನ ಭವಿಷ್ಯವನ್ನು ನೋಡಿಕೊಳ್ಳಬೇಕಿದೆ'' ಎಂದು ಕಳವಳ ವ್ಯಕ್ತಪಡಿಸಿದರು.

"ಹತ್ಯೆ ಪ್ರಕರಣಗಳನ್ನು ಪತ್ತೆ ಹಚ್ಚುವಾಗ 17ರಿಂದ 20 ವರ್ಷದೊಳಗಿನವರೆ ಹೆಚ್ಚು ಭಾಗಿಯಾಗುತ್ತಿರುವುದು ಬೆಳಕಿಗೆ ಬರುತ್ತಿದೆ. ತಪ್ಪಿತಸ್ಥರನ್ನು ತಪಾಸಣೆಗೆ ಒಳಪಡಿಸಿದಾಗ ಮಾದಕ ವ್ಯಸನಿಯಾಗಿರುವುದು ಗೊತ್ತಾಗುತ್ತಿದೆ. ಮಾದಕ ವ್ಯಸನದಿಂದ ಸಮಾಜಕ್ಕೆ ಅಪಾಯವಿದ್ದು, ಪಾಲಕರು ತಮ್ಮ ಮಕ್ಕಳ ಚಟುವಟಿಕೆಗಳ ಮೇಲೆ ನಿಗಾವಹಿಸಬೇಕು.

ಮಾದಕ ವ್ಯಸನದ ದುಷ್ಪರಿಣಾಮಗಳ ಕುರಿತು ಹೆಚ್ಚು ಜಾಗೃತಿ ಮೂಡಿಸುವಂತೆ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಲಾಗಿದೆ" ಎಂದು ಅವರು ತಿಳಿಸಿದರು.

40 ಕೋಟಿ ರೂ. ಮೌಲ್ಯದ ಡ್ರಗ್ಸ್ ನಾಶ: "ರಾಜ್ಯ ಸರ್ಕಾರವು ಡ್ರಗ್ಸ್ ಮುಕ್ತ ಕರ್ನಾಟಕ ನಿರ್ಮಾಣದ ಘೋಷಣೆ ಮಾಡಿದ್ದು, ಸಂಪೂರ್ಣವಾಗಿ ಮಾದಕ ಪದಾರ್ಥಗಳನ್ನು ಮಟ್ಟ ಹಾಕುವ ನಿಟ್ಟಿನಲ್ಲಿ ಇಲಾಖೆಯು ಸಮರವನ್ನೇ ಸಾರಿದೆ. ಕಳೆದ ವರ್ಷ 40 ಕೋಟಿ ರೂ. ಮೌಲ್ಯದ ಡ್ರಗ್ಸ್ ನಾಶಪಡಿಸಲಾಗಿದ್ದು, 10 ಟನ್ ಗಾಂಜಾ ಸುಟ್ಟು ಹಾಕಲಾಗಿದೆ. ಇಷ್ಟೊಂದು ಪ್ರಮಾಣದ ಡ್ರಗ್ಸ್ ಯುವಕರ ಕೈಸೇರಿದ್ದರೆ ಎಷ್ಟು ಕುಟುಂಬಗಳು ಹಾಳಾಗುತ್ತಿದ್ದವೋ ಎಂಬ ಆತಂಕವನ್ನು ವ್ಯಕ್ತಪಡಿಸಿದರು.

ಅಲ್ಲದೆ ಪ್ರತಿಯೊಬ್ಬರು ಡ್ರಗ್ಸ್‌ನಿಂದ ದೂರ ಇರುತ್ತೇವೆ ಎಂದು ಸಂಕಲ್ಪ ಮಾಡಿಕೊಳ್ಳಬೇಕು. ಐಟಿ ಕಂಪನಿಗಳು, ಕೈಗಾರಿಕೆಗಳು ಡ್ರಗ್ಸ್ ನಿಯಂತ್ರಣಕ್ಕೆ ಸಹಕರಿಸಬೇಕು" ಎಂದು ಕೋರಿದರು.

ರಾಜ್ಯ ಪೊಲೀಸ್ ಮಹಾನಿರ್ದೇಶಕ ಅಲೋಕ್ ಮೋಹನ್, ನಗರ ಪೊಲೀಸ್ ಆಯುಕ್ತ ಬಿ.ದಯಾನಂದ್, ಸಿಐಡಿ ವಿಭಾಗದ ಡಿಜಿಪಿ ಡಾ.ಎಂ.ಎ.ಸಲೀಂ, ಎಡಿಜಿಪಿ ಪ್ರಣಬ್ ಮೋಹಂತಿ ಸೇರಿದಂತೆ ಇಲಾಖೆಯ ಹಿರಿಯ ಅಧಿಕಾರಿಗಳು, ಮುಖ್ಯಮಂತ್ರಿಯವರ ರಾಜಕೀಯ ಕಾರ್ಯದರ್ಶಿ ಡಾ.ಕೆ.ಗೋವಿಂದರಾಜ್, ಶಾಸಕ ರಿಜ್ವಾನ್ ಅರ್ಷದ್, ಆದರ್ಶ ಡೆವಲೆಪರ್ಸ್‌ನ ವ್ಯವಸ್ಥಾಪಕ ನಿರ್ದೇಶಕ ಜಯಶಂಕರ್ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

# ಸಿಬಿಐ ನಮಗೆ ಮಾನಹಾನಿ ಮಾಡಲು ಬಯಸುತ್ತದೆ ಕೇಜ್ರಿವಾಲ್

ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಅವರು ಅಬಕಾರಿ ನೀತಿ ಪ್ರಕರಣಕ್ಕೆ ಸಂಬಂಧಿಸಿದಂತೆ ತಮ್ಮ ಸಹೋದ್ಯೋಗಿ ಮನೀಶ್ ಸಿಸೋಡಿಯಾ ಅವರನ್ನು ದೂಷಿಸುವ ಹೇಳಿಕೆ ನೀಡಿಲ್ಲ ಎಂದು ಹೇಳಿದ್ದಾರೆ. ಮನೀಶ್ ಸಿಸೋಡಿಯಾ ತಪ್ಪಿತಸ್ಥ ಎಂದು



ನಾನು ಯಾವುದೇ ಹೇಳಿಕೆ ನೀಡಿಲ್ಲ. ಆಮ್ ಆದ್ಮಿ ಪಕ್ಷ, ಮನೀಶ್ ಸಿಸೋಡಿಯಾ ಮತ್ತು ನಾನು (ಕೇಜ್ರಿವಾಲ್) ತಪ್ಪಿತಸ್ಥರಲ್ಲ ಎಂದು ನಾನು ಹೇಳಿಕೆ ನೀಡಿದ್ದೇನೆ ಎಂದು ಕೇಜ್ರಿವಾಲ್ ಅವರು ಕೇಂದ್ರೀಯ ತನಿಖಾ ದಳ (ಸಿಬಿಐ) ಬಂಧಿಸಿದ ನಂತರ ನ್ಯಾಯಾಲಯಕ್ಕೆ ತಿಳಿಸಿದರು.

ನಮಗೆ ಮಾನಹಾನಿ ಮಾಡುವುದೇ ಸಿಬಿಐ ಉದ್ದೇಶ. ನಾನು ಅಂತಹ ಯಾವುದೇ ಹೇಳಿಕೆ ನೀಡಿಲ್ಲ. ಕೇಜ್ರಿವಾಲ್ ಸಂಪೂರ್ಣ ಆರೋಪವನ್ನು ಮನೀಶ್ ಸಿಸೋಡಿಯಾ ಅವರ ಮೇಲೆ ಹೊರಿಸಿದ್ದಾರೆ ಎಂದು ಮಾಧ್ಯಮಗಳಿಗೆ ಶೀರ್ಷಿಕೆಗಳನ್ನು ನೀಡುವುದು ಸಿಬಿಐನ ಆಲೋಚನೆಯಾಗಿದೆ ಎಂದು ಕೇಜ್ರಿವಾಲ್ ಹೇಳಿದ್ದಾರೆ.

# ಸರ್ಕಾರ ಯಾವುದೇ ಟ್ಯಾಕ್ಸ್ ಹಾಕದೇ ಅಭಿವೃದ್ಧಿ ಮಾಡಲು ಸಾಧ್ಯವಿಲ್ಲ

ಬೆಳಗಾವಿ: "ಯಾವುದೇ ಸರ್ಕಾರ ವರ್ಷದಿಂದ ವರ್ಷಕ್ಕೆ ಮುಂದೆ ಹೋದಾಗ ಎಲ್ಲ ಬೆಲೆಗಳು ಏರಿಕೆ ಆಗುತ್ತವೆ. ಕಳೆದ ವರ್ಷ ಮಾಡಿದ ಯಾವುದೇ ಅಭಿವೃದ್ಧಿ ಕೆಲಸ ಶೇ.10 ರಷ್ಟು ಸಾಮಾನ್ಯವಾಗಿ ಏರಿಕೆಯಾಗುತ್ತದೆ" ಎಂದು ಕೃಷಿ ಸಚಿವ ಚೆಲುವರಾಯಸ್ವಾಮಿ ಹೇಳಿದರು.

ಜಿಲ್ಲಾ ಕಾಂಗ್ರೆಸ್ ಭವನದಲ್ಲಿಂದು ಮಾಧ್ಯಮಗಳ ಜೊತೆಗೆ ಮಾತನಾಡಿದ ಅವರು, "ರೈತರಿಗೆ ಕೊಡುವ ಸಬ್ಸಿಡಿ, ಅನುದಾನ ಕೂಡ ಏರಿಕೆ ಆಗುತ್ತದೆ. ಸರ್ಕಾರ ಯಾವುದೇ ಟ್ಯಾಕ್ಸ್ ಹಾಕದೇ ಅಭಿವೃದ್ಧಿ ಮಾಡಲು ಸಾಧ್ಯವಿಲ್ಲ. ಅವೈಜ್ಞಾನಿಕವಾಗಿ ಬೆಲೆ ಏರಿಕೆ ಮಾಡಿದಾಗ ತಪ್ಪು ಅನ್ನಬಹುದು, ಆಗ ಪ್ರಶ್ನೆ ಮಾಡಬಹುದು" ಎಂದರು.

"ಕೇಂದ್ರ ಸರ್ಕಾರ ಪೆಟ್ರೋಲ್, ಡೀಸೆಲ್ ದರ ಮತ್ತು ಸೆಸ್ ಏರಿಕೆ ಮಾಡಿತ್ತು. ಕರ್ನಾಟಕಕ್ಕೆ ಬರಬೇಕಿದ್ದ ಅನುದಾನವನ್ನು ಕೂಡ ಕೇಂದ್ರ ಸರ್ಕಾರ ಕೊಟ್ಟಿಲ್ಲ. ಮಹಾರಾಷ್ಟ್ರ, ತೆಲಂಗಾಣ ಸೇರಿ ಬೇರೆ ರಾಜ್ಯಗಳಿಗೆ ಹೋಲಿಸಿದರೆ ನಮ್ಮ ರಾಜ್ಯದಲ್ಲಿ ಪೆಟ್ರೋಲ್ ಬೆಲೆ ಕಮ್ಮಿ ಇದೆ" ಎಂದು ಸಚಿವರು ಸಮರ್ಥಿಸಿಕೊಂಡರು.

"ಮಳೆಗಾಲದಲ್ಲಿ ಹಾಲು ಹೆಚ್ಚು ಶೇಖರಣೆ ಆಗಲಿದ್ದು, ಹಾಗಾಗಿ, 50 ಎಂಎಲ್ ಹೆಚ್ಚು ಮಾಡಿದ್ದೇವೆ. ಎರಡು ರೂ. ದರ ಹೆಚ್ಚಿಸುವ ಜೊತೆಗೆ 50 ಎಂಎಲ್ ಹಾಲು ಕೂಡ ಹೆಚ್ಚಿಸಿದ್ದೇವೆ. ರೈತರಿಗೆ ಈಗಾಗಲೇ ಐದು ರೂಪಾಯಿ ಪ್ರೋತ್ಸಾಹಧನ ಕೊಡ್ತಿದ್ದೇವೆ. ಹಾಗಾಗಿ, ಹೆಚ್ಚುವರಿ ಹಣ ಕೊಡಲ್ಲ. ಹಾಲು ಹೆಚ್ಚು ಉತ್ಪಾದನೆ ಆಗ್ತಿತ್ತು ಅದನ್ನ ಕೊಳ್ಳಲು 50 ಎಂಎಲ್ ಜಾಸ್ತಿ ಮಾಡಿದ್ದೇವೆ. ಅದಕ್ಕೆ ಎರಡು ರೂಪಾಯಿ ಪಡೆಯುತ್ತಿದ್ದೇವೆ" ಎಂದು ಹೇಳಿದರು.

ಗ್ಯಾರಂಟಿ ಯೋಜನೆಯಿಂದ ಸರ್ಕಾರದ ಖಜಾನೆ ಖಾಲಿ ಎಂದು ಪ್ರತಿಪಕ್ಷಗಳ ಆರೋಪಕ್ಕೆ ಪ್ರತಿಕ್ರಿಯಿಸಿ, "ಹೊಸ ಸರ್ಕಾರ ಬಂದ ಮೇಲೆ



ಗ್ಯಾರಂಟಿ ಕೊಟ್ಟು ಯಾವುದೇ ಅಭಿವೃದ್ಧಿ ನಿಲ್ಲಿಸಿಲ್ಲ. ಐದು ವರ್ಷ ಬಿಜೆಪಿಯವರು ಫೇಲ್ ಆಗಿದ್ದಕ್ಕೆ ಜನ ನಮಗೆ ಅಧಿಕಾರ ಕೊಟ್ಟಿದ್ದಾರೆ. ಕೇಂದ್ರ ಸರ್ಕಾರ ನಮಗೆ ಕೊಡಬೇಕಾದ ಎನ್‌ಡಿಆರ್‌ಎಫ್ ಅನುದಾನ ಕೊಡಲಿಲ್ಲ.

ಸುಪ್ರೀಂ ಕೋರ್ಟ್?ಗೆ ಹೋಗಿ ನಾವು ಅನುದಾನ ತಂದಿದ್ದೇವೆ. ವಿರೋಧ ಪಕ್ಷದವರಿಗೆ ಕೆಲಸ ಇಲ್ಲಾ, ಹಾಗಾಗಿ ಏನೇನೋ ಮಾತಾಡ್ತಿದ್ದಾರೆ" ಎಂದು ಕಿಡಿಕಾರಿದರು.

ಚನ್ನಪಟ್ಟಣದಲ್ಲಿ ಡಿ.ಕೆ. ಶಿವಕುಮಾರ್ ವಾಸ್ತವ್ಯ ವಿಚಾರಕ್ಕೆ ಪ್ರತಿಕ್ರಿಯಿಸಿ, "ಅವರು ಅಧ್ಯಕ್ಷರು, ಕ್ಷೇತ್ರದ ವಿಚಾರ ನೋಡಿಕೊಳ್ಳುತ್ತಿದ್ದಾರೆ. ಚನ್ನಪಟ್ಟಣಕ್ಕೆ ಯಾವಾಗ ಬೇಕಾದರೂ ಚುನಾವಣೆ ಘೋಷಣೆ ಆಗಬಹುದು. ಇನ್ನು ಡಿಕೆಶಿ ಅಥವಾ ಡಿ.ಕೆ. ಸುರೇಶ್ ಯಾರು ಅಭ್ಯರ್ಥಿ ಅಂತ ತೀರ್ಮಾನ ಆಗಿಲ್ಲ. ಈ ಬಗ್ಗೆ ಸಿಎಂ, ಡಿಸಿಎಂ ಕುಳಿತು ಚರ್ಚೆ ಮಾಡುತ್ತಾರೆ" ಎಂದು ತಿಳಿಸಿದರು.

ಮಂಡ್ಯದಲ್ಲಿ ನನ್ನನ್ನು ಸೋಲಿಸಲು ಯತ್ನಿಸಿದ್ರು ಎಂಬ ಕೇಂದ್ರ ಸಚಿವ ಕುಮಾರಸ್ವಾಮಿ ಹೇಳಿಕೆಗೆ ಪ್ರತಿಕ್ರಿಯಿಸಿ, "ನಮ್ಮನ್ನೂ ಸೋಲಿಸಲು ನೋಡಿದರು. ಆದರೂ ಜನ ಗೆಲ್ಲಿಸಿದ್ದಾರೆ. ನಾನು ಜೆಡಿಎಸ್ ನಲ್ಲಿ ಇಲ್ಲಾ, ನಮ್ಮ ಪಕ್ಷದ ಪರವಾಗಿ ಕೆಲಸ ಮಾಡಬೇಕು.

ನಮ್ಮ ಅಭ್ಯರ್ಥಿ ಗೆಲ್ಲಿಸಲು ಕೆಲಸ ಮಾಡಿದ್ದೇವೆ. ಕುಮಾರಸ್ವಾಮಿ ಅವರು ಕೆಲಸ ಮಾಡಲಿ.

ಒಂದು ವರ್ಷ ಏನೂ ಮಾತಾಡಲ್ಲ. ಕುಮಾರಸ್ವಾಮಿ ಹೊಸದಾಗಿ ಕೇಂದ್ರದಲ್ಲಿ ಮಂತ್ರಿ ಆಗಿದ್ದಾರೆ. ತಂದೆ ಮಾಡಲು ಆಗದ ಕೆಲಸ ಮಾಡ್ತೇನಿ ಅಂತಾ ಭರವಸೆ ಕೊಟ್ಟಿದ್ದಾರೆ. ಅವರು ಕೆಲಸ ಮಾಡಿದ್ರೇ ನಾನು ಹೆಚ್ಚು ಖುಷಿ ಪಡುತ್ತೇನೆ. ಈಗ ಕುಮಾರಸ್ವಾಮಿ ಬಗ್ಗೆ ಟೀಕೆ ಟಿಪ್ಪಣಿ ಮಾಡಲ್ಲ" ಎಂದರು.

# ತುಮಕೂರಿನ ಹೇಮಾವತಿ ನೀರು ರಾಮನಗರಕ್ಕೆ ಹರಿಸುವ ಕನಸನ್ನು ಶೀಘ್ರವೇ ಕೈಬಿಡಬೇಕು

*ರೈತರ ಹಿತ ಕಾಯುವುದು ಸರ್ಕಾರದ ಕೆಲಸ, ಆದರೆ ಒಂದು ಜಿಲ್ಲೆಯ ರೈತರಿಗಾಗಿ ಮತ್ತೊಂದು ಜಿಲ್ಲೆಯ ರೈತರಿಗೆ ಅನ್ಯಾಯ ಮಾಡಲು ಹೊರಟಿರುವುದು ಯಾವ ನ್ಯಾಯ. ಸರ್ಕಾರ ಕೂಡಲೇ ಈ ಹೇಮಾವತಿ ಕೆನಾಲ್ ಕಾಮಗಾರಿಯನ್ನು ನಿಲ್ಲಿಸಿ ರೈತರಿಗೆ ಶಕ್ತಿಯಾಗಿ ನಿಲ್ಲದೇ ರೈತರ ವಿರೋಧಿಯಾದರೆ, ಇಂದರಿಂದ ಯಾವುದೇ ಘಟನೆ ನಡೆದರೂ ಸರ್ಕಾರವೇ ಜವಬ್ದಾರಿಯಾಗಿರುತ್ತದೆ.*

*– ದೇವರಾಜ್ ಕೆ.ಎನ್, ತಾ. ಅಧ್ಯಕ್ಷ, ನಮ್ಮ ಕರ್ನಾಟಕ ರಕ್ಷಣಾ ವೇದಿಕೆ.*

*ರೈತರಿಗೆ ವಿಷವುಣಿಸುವ ಕೆಲಸವನ್ನು ಸರ್ಕಾರ ಮಾಡುತ್ತಿದೆ. ಕೆನಾಲ್ ಯೋಜನೆ ಬೇಡವೆಂದು ರೈತರು ಗೋಗರೆದರೂ ಅವರ ಅಳಲನ್ನು ತಿರಸ್ಕರಿಸಲಾಗಿದೆ. ಈ ಸರ್ಕಾರಕ್ಕೆ ಕಣ್ಣು ಮತ್ತು ಕಿವಿ ಎರಡು ಇಲ್ಲಾ, ಅವರೆಡನ್ನು ತೆರೆಸುವ ಪ್ರಯತ್ನವನ್ನು ಇವತ್ತಿನ ಪ್ರತಿಭಟನೆಯ ಮೂಲಕ ಮಾಡುತ್ತಿದ್ದೇವೆ.*

*– ಅಶ್ವತ್ಥ್‌ನಾರಾಯಣಾ ಮಾಜಿ ಪ.ಪಂ ಸದಸ್ಯ. ಕೊರಟಗೆರೆ.*

ಕೊರಟಗೆರೆ:– ಹೇಮಾವತಿ ನೀರು ಜಿಲ್ಲೆಯ ರೈತರಿಗೆ ಅತ್ಯವಶ್ಯಕವಾಗಿದೆ. ರೈತರಿದ್ದರೆ ದೇಶ ಮತ್ತು ನಾಡು, ಆಗಾಗಿ ಹೇಮಾವತಿ ಲಿಂಕ್ ಕೆನಾಲ್ ಕಾಮಗಾರಿ ಮುಖಾಂತರ ಇನ್ನೂಮುಂದೆ ರಾಮನಗರಕ್ಕೆ ಒಂದು ಹನಿಯು ಸಹ ಬಿಡುವುದಿಲ್ಲ.

1ಇಂದೇ ಈ ಕಾಮಗಾರಿಯ ಕನಸು ಕೈ ಬಿಡದಿದ್ದರೆ ಜಿಲ್ಲಾದ್ಯಂತ ಉಗ್ರ ಹೋರಾಟ ನಡೆಸಲಾಗುವುದು

## ಕೊರಟಗೆರೆ ಬಂದ್ ಯಶಸ್ವಿ

ಹೇಮಾವತಿ ಲಿಂಕ್ ಕೆನಾಲ್ ಕಾಮಗಾರಿ ವಿರೋಧಿಸಿ ನೀರಾವರಿ ಹೋರಾಟ ಸಮಿತಿ, ರೈತಪರ ಸಂಘಟನೆಗಳು, ಕನ್ನಡಪರ ಸಂಘಟನೆಗಳು ತುಮಕೂರು ಜಿಲ್ಲೆ ಬಂದ್‌ಗೆ ಕರೆ ನೀಡಿದ ಹಿನ್ನೆಲೆ, ಕೊರಟಗೆರೆಯ ನೀರಾವರಿ ಹೋರಾಟ ಸಮಿತಿ ಸೇರಿದಂತೆ ಇತರೆ ಸಂಘಟನೆಗಳು ಬೆಂಬಲ ಸೂಚಿಸಿ ಬಂದ್‌ಗೆ ಕರೆ ನೀಡಲಾಗಿತ್ತು. ಪಟ್ಟಣದ ಕೆ ಎಸ್ ಆರ್ ಟಿ ಸಿ ಬಸ್ ನಿಲ್ದಾಣದಿಂದ ತಾಲೂಕು ಕಚೇರಿಯವರೆಗೆ ಪ್ರತಿಭಟನೆ ನಡೆಸಿ ತಹಶೀಲ್ದಾರ್ ಮುಖಾಂತರ ರಾಜ್ಯಪಾಲರಿಗೆ ಮನವಿಯನ್ನು ಸಲ್ಲಿಸಿದ್ದು, ಅಂಗಡಿ–ಮುಗ್ಗಟ್ಟುಗಳು ಸ್ವಯಂಪ್ರೇರಿತರಾಗಿ ಬಾಗಿಲು ಮುಚ್ಚಿ ಬೆಂಬಲ ಸೂಚಿಸಿದ್ದು, ಬಂದ್ ಯಶಸ್ವಿಯನ್ನು ಕಂಡಿದೆ.



ಎಂದು ಮಾಜಿ ಶಾಸಕ ಪಿಆರ್ ಸುಧಾಕರ್ಲಾಲ್ ರಾಜ್ಯ ಸರ್ಕಾರಕ್ಕೆ ಎಚ್ಚರಿಕೆ ನೀಡಿದರು.

ತುಮಕೂರು ಜಿಲ್ಲೆಯಲ್ಲಿ ಕಾವೇರಿ ನೀರಾವರಿ ನಿಗಮದಿಂದ ನಡೆಯುತ್ತಿರುವ ಹೇಮಾವತಿ ಲಿಂಕ್ ಕಾಮಗಾರಿ ವಿರೋಧಿಸಿ ಬಂದ್‌ಗೆ ರೈತ ಸಂಘಟನೆಗಳು, ಹೋರಾಟ ಸಮಿತಿ, ವಿವಿಧ ಕನ್ನಡಪರ ಸಂಘಟನೆಗಳು ತುಮಕೂರು ಬಂದ್‌ಗೆ ಕರೆ ನೀಡಿದ ಹಿನ್ನೆಲೆ ಕೊರಟಗೆರೆಯಲ್ಲೂ ಸಹ ಬಂದ್‌ಗೆ ಕರೆ ನೀಡಿ ಪಟ್ಟಣದ ಕೆ ಎಸ್ ಆರ್ ಟಿ ಸಿ ಬಸ್‌ನಿಲ್ದಾಣದಿಂದ ತಾಲೂಕು ಕಚೇರಿಯವರೆಗೆ ಬೃಹತ್ ಪ್ರತಿಭಟನೆ ನಡೆಸಿ ಮಾತನಾಡಿದರು.

ಬಿಜೆಪಿ ಮಾಜಿ ಅಧ್ಯಕ್ಷ ಪವನ್‌ಕುಮಾರ್ ಮಾತನಾಡಿ, ರೈತರ ವಿರೋಧಿಯಾಗಿ ರಾಜ್ಯ ಸರ್ಕಾರ ನಡೆಯುತ್ತಿದೆ. ಹೇಮಾವತಿ ಎಕ್ಸ್‌ಪ್ರೆಸ್ ಚಾನಲ್ ಮುಖಾಂತರ ಇಲ್ಲಿನ ಹೇಮಾವತಿ ನೀರನ್ನು ರಾಮನಗರ, ಮಾಗಡಿಗೆ ಹರಿಸಲು ಡಿಸಿಎಂ ಡಿ.ಕೆ ಶಿವಕುಮಾರ್ ಯೋಜನೆ ರೂಪಿಸಿಕೊಂಡಿದ್ದಾರೆ.

ಅದರಿಂದ ಇದನ್ನು ಖಂಡಿಸಿ ತುಮಕೂರು ಜಿಲ್ಲಾದ್ಯಂತ ಪ್ರತಿಭಟನೆ ನಡೆಸಲಾಗುತ್ತಿದೆ. ನೀರಾವರಿ ವಿಚಾರಕ್ಕೆ ಮತ್ತೊಂದು ರಾಜ್ಯದ ಮೇಲೆ ಹೋರಾಟ ನಡೆಸಬೇಕಿತ್ತು. ಈಗ ರಾಜ್ಯದಲ್ಲಿಯೇ ನೀರಿಗಾಗಿ ಮತ್ತೊಂದು ಜಿಲ್ಲೆಯ ಜೊತೆ ಕಿತ್ತಾಡುವಂತೆ ಮಾಡಿದೆ ಈ ಸರ್ಕಾರ ಎಂದು ಆರೋಪ ಮಾಡಿದರು.

ಬಿಜೆಪಿ ಅಧ್ಯಕ್ಷ ದರ್ಶನ್ ಮಾತನಾಡಿ, ಹೇಮಾವತಿ ನೀರು ಈವರೆಗೂ ಜಿಲ್ಲೆಯಲ್ಲಿ ಪೂರ್ಣ ಪ್ರಮಾಣದಲ್ಲಿ ಹಂಚಿಕೆಯಾಗಿಲ್ಲ. ಹೇಮಾವತಿ ತುಮಕೂರು ಜಿಲ್ಲೆಗೆ 24ಟಿಎಂಸಿ ಮಾತ್ರ ಬಂದಿದೆ, ಇದರಲ್ಲಿ 7ಟಿಎಂಸಿ ನೀರನ್ನು ರಾಮನಗರಕ್ಕೆ ಕೊಡುತ್ತಾ ಇದ್ದಾರೆ, ತುಮಕೂರು ಗ್ರಾಮಾಂತರಕ್ಕೆ 1.5 ಟಿಎಂಸಿ, ತುಮಕೂರು ನಗರಕ್ಕೆ 1 ಟಿಎಂಸಿ ನೀರು ಮಾತ್ರ ಬಂದಿದೆ. ರೈತರಿಗೆ ಮೀಸಲಿರುವಂತಹ ನೀರನ್ನು ಕೇಳಿದರೆ ಈ ಭಾಗದ ರೈತರು ಏನು ಮಾಡಬೇಕು? ಅದ್ದರಿಂದ ಈ ಸಮಸ್ಯೆ ಬಗೆಹರಿಯದಿದ್ದರೆ ಮುಂದಿನ ದಿನಗಳಲ್ಲಿ ಉಗ್ರ ಹೋರಾಟ ಮಾಡಲಾಗುವುದು ಎಂದರು.

ರೈತ ಸಂಘದ ಅಧ್ಯಕ್ಷ ಸಿದ್ದರಾಜು ಮಾತನಾಡಿ, ಹೇಮಾವತಿ ನೀರು ರೈತರ ಜೀವನಾಡಿ. ಹೇಮಾವತಿ ಲಿಂಕ್ ಕೆನಾಲ್ ಯೋಜನೆ ಅವೈಜ್ಞಾನಿಕವಾಗಿದೆ. ಇದರಿಂದ ರಾಜ್ಯಕ್ಕೆ ನಷ್ಟ ಉಂಟಾಗುತ್ತಿದ್ದರು ಅನುದಾನ ಬಿಡುಗಡೆಗೊಳಿಸಿ ರಾಮನಗರ ಜಿಲ್ಲೆಗೆ ಹರಿಸಲು ಸಿದ್ದತೆ ಮಾಡಿಕೊಳ್ಳುತ್ತಿದೆ. ರಾಜ್ಯ ನಾಯಕರೇ ಬೆಂಬಲವನ್ನು ವ್ಯಕ್ತಪಡಿಸಿರುವುದನ್ನು ಗಮನಿಸಿದರೆ ದೊಡ್ಡ ಮಟ್ಟದ ಹಣಕಾಸಿನ ವ್ಯವಹಾರವನ್ನು ನಡೆಸಿದ್ದಾರೆಂದು ತಿಳಿಯುತ್ತದೆ. ಈ ಯೋಜನೆ ಇಲ್ಲಿಗೆ ಕೈ ಬಿಡದಿದ್ದರೆ ಮುಂದೆ ಆಗುವಂತಹ ಅನಾಹುತಕ್ಕೆ ಸರ್ಕಾರ ನೇರಹೊಣೆಯಾಗಲಿದೆ ಎಂದು ಸರ್ಕಾರಕ್ಕೆ ಎಚ್ಚರಿಕೆಯ ಸಂದೇಶವನ್ನು ನೀಡಿದರು.

ಈಪ್ರತಿಭಟನೆಯಲ್ಲಿ ತೆಂಗು ನಾರು ನಿಗಮದ ಮಾಜಿ ಅಧ್ಯಕ್ಷ ವೆಂಕಟಾಚಲಯ್ಯ, ರೈತ ಸಂಘದ ಅಧ್ಯಕ್ಷ ರಂಗಹನುಮಯ್ಯ, ಶಬ್ಬೀರ್ಪಾಷಾ, ಮಾರುತಿ, ಕರವೇ ಅಧ್ಯಕ್ಷ ನಟರಾಜ್, ಪ್ರಸನ್ನಕುಮಾರ್, ಮುಖಂಡರಾದ ನರಸಿಂಹರಾಜು, ದಾಡಿವೆಂಕಟೇಶ್, ರವಿಕುಮಾರ್(ಕೆಂಗ), ಅಶ್ವತ್ಥ್‌ನಾರಾಯಣರಾಜು (ಲಂಬುರಾಜು), ತುಂಬಾಡಿ ಲಕ್ಷ್ಮೀಶ್, ಕಾಮರಾಜು, ಗುರುದತ್ತ , ಜೆಡಿಎಸ್ ಮುಖಂಡ ಕೆ ವಿ ಅಣ್ಣಪ್ಪ ಸೇರಿದಂತೆ ಇತರರು ಹಾಜರಿದ್ದರು.

## ಪುಟ್ಬಾಲ್ ಲೀಗ್ ಪಂದ್ಯಕ್ಕೆ ಚಾಲನೆ ನೀಡಿದ ಎಸ್.ಆರ್.ಶ್ರೀನಾಥ್

ಶಿವಮೊಗ್ಗ: ನಗರದ ನೆಹರು ಸ್ಟೇಡಿಯಂ ನಲ್ಲಿ ಶಿವಮೊಗ್ಗ ಜಿಲ್ಲಾ ಪುಟ್ಬಾಲ್ ಅಸೋಸಿಯೇಷನ್ ವತಿಯಿಂದ ನಡೆಸಲಾಗುತ್ತಿರುವ ಹನ್ನೆರೆಡು ದಿನದ ಲೀಗ್ ಚಾಂಪಿಯನ್ ಶೀಪ್ ಪಂದ್ಯಾವಳಿಯ ಮೂರನೇ ದಿನವಾದ ಇಂದು ಮರ್ಚೆಂಟ್ಸ್ ಪುಟ್ಬಾಲ್ ಟೀಮ್ ಹಾಗೂ ಮಹಾಮಡನ್ ಪುಟ್ಬಾಲ್ ಟೀಮ್ ನಡುವಿನ ಪಂದ್ಯಕ್ಕೆ ಶುಭ ಕೋರಲಾಯಿತು ಅತಿಥಿಗಳಾಗಿ ಅಸೋಸಿಯೇಷನ್ ಅಧ್ಯಕ್ಷರಾದ ಶ್ರೀನಾಥ್.ಎಸ್.ಆರ್,



ಯುವಜನ ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕರಾದ ಮಂಜುನಾಥ್, ಪತ್ರಕರ್ತರಾದ ಗಾರಾ.ಶ್ರೀನಿವಾಸ್ ಸೇರಿದಂತೆ ಅಸೋಸಿಯೇಷನ್ ವಿಭಾಗದ ಉಪಾಧ್ಯಕ್ಷರಾದ ಜ್ಞಾನಪ್ರಕಾಶ್, ರಾಮ್ ಪವಾರ್, ಖಜಾಂಚಿಯಾದ ಸೂಲಯ್ಯ ಸುರೇಶ್, ಅಂಬೇಡ್ಕರ್ ಪುಟ್ಬಾಲ್ ಕ್ಲಬ್ ನ ಅಧ್ಯಕ್ಷರು ನೂತನ ಸದಸ್ಯರಾದ ಕೆ.ಹರ್ಷಾ ಬೋವಿ, ಹಾಗೂ ಸೂಸೈನ್ ನಾದನ್ ಮತ್ತು ವಿಜಯ್ ಕುಮಾರ್, ಮಹ್ಮದ್ ಆರೀಪ್,ರವರುಗಳು ಉಪಸ್ಥಿತರಿದ್ದರು.

# ವೈದ್ಯ ಹಾಗೂ ಸಾರ್ವಜನಿಕರ ನಡುವೆ ವಾಕ್ ಸಮರ...

ಆಸ್ಪತ್ರೆಗೆ ಆಗಮಿಸುವ ರೋಗಿಗಳಿಗೆ ರೌಡಿಗಳ ರೀತಿಯಲ್ಲಿ ಡಾ.ನವೀನ್ ಬೆದರಿಕೆ ಹಾಕ್ತಾರೇ. ಆಸ್ಪತ್ರೆಯಲ್ಲಿ ರೋಗಿಗಳಿಗೆ ವೈದ್ಯರಿಂದ ಆಗುತ್ತಿರುವ ಸಮಸ್ಯೆಯ ಬಗ್ಗೆ ಪ್ರಶ್ನೆ ಮಾಡಿದ್ದೇ ತಪ್ಪಾಯ್ತು. ಸಮವಸ್ತ್ರವೇ ಇಲ್ಲದ ಕೊರಟಗೆರೆ ಆಸ್ಪತ್ರೆಯ ವೈದ್ಯ ಡಾ.ನವೀನ್ ನನ್ನ ಮೈಮೇಲಿನ ಬಟ್ಟೆ ಎಳೆದು ಜಾತಿನಿಂದನೆ ಮಾಡಿದ್ದಾರೆ. ಡಾ.ನವೀನ್ ಮೇಲೆ ಪ್ರಕರಣ ದಾಖಲಿಸಲು ಠಾಣೆಗೆ ದೂರು ನೀಡಿದ್ದೇನೆ.

– ಚಿಕ್ಕರಂಗಯ್ಯ. ಜಿಲ್ಲಾ ಕಾಂಗ್ರೆಸ್ ಉಪಾಧ್ಯಕ್ಷ. ತುಮಕೂರು

ಸರಕಾರಿ ಆಸ್ಪತ್ರೆಗೆ ಚಿಕ್ಕರಂಗಯ್ಯ ಚಿಕಿತ್ಸೆಗೆ ಬಂದಾಗ ಡಾ.ನವೀನ್ ನಡುವೆ ವಾಗ್ವಾದ ನಡೆದಿದೆ. ಆಸ್ಪತ್ರೆಗೆ ಬರುವ ರೋಗಿಗಳ ಬಗ್ಗೆ ಸೌಮ್ಯತೆಯಿಂದ ವರ್ತಿಸಲು ಈಗಾಗಲೇ ನವೀನ್‌ಗೆ ಸೂಚಿಸಲಾಗಿದೆ. ದೂರಿನ ಬಗ್ಗೆ ನನಗೇನು ಮಾಹಿತಿ ಇಲ್ಲ. ಆಸ್ಪತ್ರೆಯಲ್ಲಿ ಮತ್ತೇ ಇಂತಹ ಘಟನೆ ಆಗದಂತೆ ಕರೆದು ಮಾತನಾಡ್ತೇನೆ. ಆರೋಗ್ಯ ಇಲಾಖೆಗೆ ಘಟನೆಯ ಬಗ್ಗೆ ವರದಿ ನೀಡಲಾಗಿದೆ.

– ಡಾ.ಲಕ್ಷ್ಮೀಕಾಂತ.ಟಿ.ಎಸ್, ಮುಖ್ಯ ಆಡಳಿತ ವೈದ್ಯಾಧಿಕಾರಿ. ಕೊರಟಗೆರೆ

ಕೊರಟಗೆರೆ:– ನಿನೇನು ಎಸಿನಾ ಅಥವಾ ಡಿಸಿನಾ ನಿನ್ನಿಂದ ನಾನು ಹೆದರೋಕೆ.. ನಿನ್ನ ಹೆಸರೇನು ಹೇಳಿನೋಡು ನಾನೇನು ಮಾಡ್ತೀನಿ ಅಂತಾ ಗೋತ್ತಾಗುತ್ತೇ.. ನಾನು ಯಾರಿಗೂ ಹೆದರೋದಿಲ್ಲ ಹೆದರಿಸೋಕೆ ಬರಬೇಡಿ ನೀವು. ನಾನು ಪ್ರಕರಣ ದಾಖಲು ಮಾಡ್ತಿದ್ರೇ ನೀವು ಜೈಲಿಗೆ ಹೋಗ್ತಿರಾ ಹುಷಾರ್ ಎಂದು ಡಾ.ನವೀನ್ ಆಸ್ಪತ್ರೆಗೆ ಚಿಕಿತ್ಸೆಗೆಂದು ಆಗಮಿಸಿದ ಚಿಕ್ಕರಂಗಯ್ಯನಿಗೆ ಹೆದರಿಸಿರುವ ಘಟನೆ ನಡೆದಿದೆ. ಕೊರಟಗೆರೆ ಪಟ್ಟಣದ ಸಾರ್ವಜನಿಕ ಸರಕಾರಿ ಆಸ್ಪತ್ರೆಯಲ್ಲಿ ಜೂ.25ರ ಮಂಗಳವಾರ ಬೆ.11ಗಂಟೆಯ ಸಮಯದಲ್ಲ ಘಟನೆ ಜರುಗಿದ್ದು.



ಡಾ.ನವೀನ್ ಜೂ.24ರ ಸೋಮವಾರ ಬೆ.9ರಿಂದ ಜೂ.25ರ ಮಂಗಳವಾರ ಬೆ.9ರ ವರೇಗೆ ಕರ್ತವ್ಯನಿರತ ವೈದ್ಯರು. ಆದರೇ ಡಾ.ನವೀನ್‌ಗೆ ಆಸ್ಪತ್ರೆಯ್ಲಲಿ ಜೂ.25ರ ಬೆ.11ರ ನಂತರ ಅವರು ಕರ್ತವ್ಯದಲ್ಲಿ ಇಲ್ಲದಿದ್ದರೂ ಅನಾವಶ್ಯಕವಾಗಿ ನಾಗರೀಕರ ಮೇಲೆ ಹೋಗಿ ಕಿರಿಕಿರಿ ಮಾಡಿಕೊಂಡಿದ್ದಾರೆ ,ವೈದ್ಯರು ಸಮವಸ್ತ್ರ ಧರಿಸದೇ ರೋಗಿಗಳ ಜೊತೆ ವರ್ತಿಸಿದ ರೀತಿ ಸರಿಯೇ ಎಂದು ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಘಟನೆಗೂ ನವೀನ್‌ಗೂ ಸಂಬಂಧ ಏನು.?: ಕೊರಟಗೆರೆ ಸಾರ್ವಜನಿಕ ಆಸ್ಪತ್ರೆಯಲ್ಲಿ ವೈದ್ಯರ ಕೊರತೆಯ ಬಗ್ಗೆ ಕಾಂಗ್ರೆಸ್ ಜಿಲ್ಲಾ ಉಪಾಧ್ಯಕ್ಷ ಚಿಕ್ಕರಂಗಯ್ಯ ಆಸ್ಪತ್ರೆಯ ವೈದ್ಯ ಡಾ.ಪುರುಷೋತ್ತಮ್‌ಗೆ ಪ್ರಶ್ನೆ ಮಾಡ್ತಾರೇ. ಅಷ್ಟರಲ್ಲಿ ಸ್ಥಳಕ್ಕೆ ಆಗಮಿಸಿದ ವೈದ್ಯ ಡಾ.ನವೀನ್ ಏಕಾಏಕಿ ಕಿರುಚಬೇಡಿ ಇಲ್ಲಿ ಯಾರು ಹೆದರೋರು ಯಾರು ಇಲ್ಲ. ನನಗೇ ಲೌಡಕ್ಕೆಬಾಲ್ ಅಂತಿಯಾ ನೀನು ನಿನ್ನ ಹೆಸರೇನು ನಿನಗೇ ಏನ್ ಮಾಡ್ತೀನಿ ನೋಡ್ತಾ ಇರು ಅಂತಾರೇ. ವೈದ್ಯ ಡಾ.ಪುರುಷೋತ್ತಮ ಅವರು ಡಾ.ನವೀನ್‌ಗೆ ಸುಮ್ಮನಿರಲು ಸೂಚಿಸಿದ್ರು ಸುಮ್ಮನಾಗದೇ ಜಗಳಕ್ಕೆ ಇಳಿದಿರೋದು ಎಷ್ಟು ಸರಿ ಎಂಬುದಕ್ಕೆ ಆರೋಗ್ಯ ಇಲಾಖೆಯೇ ಸ್ಪಷ್ಟನೇ ನೀಡಬೇಕಾಗಿದೆ.

ಪೊಲೀಸ್ ಠಾಣೆಗೆ ಪ್ರಕರಣಕ್ಕೆ ದೂರು.. : ಸಾರ್ವಜನಿಕ ಆಸ್ಪತ್ರೆಯ ಡಾ.ನವೀನ್ ಸಮವಸ್ತ್ರವೇ ಇಲ್ಲದೇ ಚಿಕಿತ್ಸೆಗೆ ಹೋದ ನನ್ನನ್ನು ಅವಾಚ್ಯ ಶಬ್ದಗಳಿಂದ ಬೈದು, ಕೈಎತ್ತಿ ಹೊಡೆಯಲು ಬಂದು ಜಾತಿಯ ಹೆಸರೇಳಿ ನಿಂದನೆ ಮಾಡಿದ್ದಾನೆ ಎಂದು ಕೊರಟಗೆರೆ ಪೊಲೀಸ್ ಠಾಣೆಗೆ ದಲಿತ ಮುಖಂಡ ಚಿಕ್ಕರಂಗಯ್ಯ ದೂರು ನೀಡಿದ್ದಾನೆ. ಸಾರ್ವಜನಿಕ ಆಸ್ಪತ್ರೆಯಲ್ಲಿ ಪದೇ ಪದೇ ಕರ್ತವ್ಯಲೋಪ ಮಾಡುವ ಡಾ.ನವೀನ್‌ರನ್ನು ತಕ್ಷಣ ಅಮಾನತು ಮಾಡುವಂತೆ ಗೃಹಸಚಿವ ಡಾ.ಜಿ.ಪರಮೇಶ್ವರ್ಗೆ ಮನವಿ ಮಾಡಿರುವ ಘಟನೆ ನಡೆದಿದೆ.

* ಆಸ್ಪತ್ರೆಯ ವೈದ್ಯರಿಗೆ ನೊಟೀಸ್ ಜಾರಿ.. : ವೈದ್ಯರು ನಿಗಧಿತ ಸಮಯಕ್ಕೆ ಆಸ್ಪತ್ರೆಗೆ ಆಗಮಿಸದೇ ರೋಗಿಗಳಿಗೆ ಸಮಸ್ಯೆ ಆಗುತ್ತಿರುವ ಬಗ್ಗೆ ದೂರು ಬಂದಿವೆ. ವೈದ್ಯರಿಗೆ ಮೌಖಿಕವಾಗಿ ಹಲವು ಬಾರಿ ತಿಳಿಸಿದ್ರು ಸಮಸ್ಯೆ ಸರಿಹೋಗಿಲ್ಲ. ಕರ್ತವ್ಯಕ್ಕೆ ನಿಗಧಿತ ಸಮಯಕ್ಕೆ ಆಗಮಿಸದೇ ಇದ್ದರೇ ವೈದ್ಯರೇ ನೇರಹೊಣೆ ಆಗಬೇಗುತ್ತೇ. ಚಿಕ್ಕರಂಗಯ್ಯ ಮೇಲೆ ಡಾ.ನವೀನ್ ನೀಡಿರುವ ದೂರುಪತ್ರ ಕುರಿತು ವಿಚಾರಣೆ ಪ್ರಯುಕ್ತ ಜೂ.25ರ ಮ.3.30ಕ್ಕೆ ಹಾಜರಾಗುವಂತೆ ಮುಖ್ಯ ವೈದ್ಯಾಧಿಕಾರಿ ಡಾ.ಲಕ್ಷ್ಮೀಕಾಂತ ಅಧಿಕೃತ ಜ್ಞಾಪನ ಪತ್ರದಲ್ಲಿ ತಿಳಿಸಿದ್ದಾರೆ.

# ಸಾರ್ವಜನಿಕ ರಸ್ತೆ ಒತ್ತುವರಿ ನಿರ್ದಾಕ್ಷಿಣ್ಯವಾಗಿ ತೆರವುಗೊಳಿಸಿ ಜನಸ್ಪಂದನ ಸಭೆಯಲ್ಲಿ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಕಟ್ಟುನಿಟ್ಟಿನ ಸೂಚನೆ

ಚಾಮರಾಜನಗರ: ಬಂಡಿದಾರಿ ಸಾರ್ವಜನಿಕ ರಸ್ತೆಯಂತಹ ಸ್ಥಳಗಳ ಒತ್ತುವರಿಯನ್ನು ಒಂದು ತಿಂಗಳೊಳಗೆ ನಿರ್ದಾಕ್ಷಿಣ್ಯವಾಗಿ ತೆರವುಗೊಳಿಸಿ ವರದಿ ನೀಡುವಂತೆ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಸೂಚನೆ ನೀಡಿದರು.
ಚಾಮರಾಜನಗರ ತಾಲೂಕಿನ ಹರದನಹಳ್ಳಿಯ ವಾಲ್ಮೀಕಿ ಭವನದಲ್ಲಿಂದು ಜನಸ್ಪಂದನ ಕಾರ್ಯಕ್ರಮದಲ್ಲಿ ಸಾರ್ವಜನಿಕರ ಅಹವಾಲುಗಳನ್ನು ಆಲಿಸಿ ಅವರು ಮಾತನಾಡಿದರು. ಜನಸ್ಪಂದನ ಕಾರ್ಯಕ್ರಮದಲ್ಲಿ ಸಾರ್ವಜನಿಕ ರಸ್ತೆ, ಬಂಡಿದಾರಿಯಂತಹ ಸ್ಥಳಗಳನ್ನು ಒತ್ತುವರಿ ಮಾಡಿರುವ ಬಗ್ಗೆ ಸಾಕಷ್ಟು ದೂರುಗಳು ಬಂದಿವೆ. ಭೂ ದಾಖಲೆ, ಕಂದಾಯ ಇಲಾಖೆಯ ಅಧಿಕಾರಿಗಳು ಸರ್ವೆ ಕಾರ್ಯ ನಡೆಸಿ ಒತ್ತುವರಿ ತೆರವುಗೊಳಿಸಬೇಕು. ಸಮರೋಪಾದಿಯಲ್ಲಿ ಒತ್ತುವರಿ ಸಮಸ್ಯೆಗಳನ್ನು ತ್ವರಿತವಾಗಿ ಇತ್ಯರ್ಥ ಪಡಿಸಬೇಕು. ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಬೇಕೆಂದು ಜಿಲ್ಲಾಧಿಕಾರಿಯವರು ನಿರ್ದೇಶನ ನೀಡಿದರು.

ಹಲವೆಡೆ ವಿದ್ಯುತ್ ತಂತಿಗಳು ಜೋತಾಡುತ್ತಿರುವ ಬಗ್ಗೆಯೂ ದೂರುಗಳು ಇವೆ. ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮದ ಅಧಿಕಾರಿಗಳು ವ್ಯಾಪಕವಾಗಿ ಪರಿಶೀಲಿಸಿ ಸರಿಪಡಿಸುವ ಕಾರ್ಯಕ್ಕೆ ಮುಂದಾಗಿ. ಎಲ್ಲಿಯೂ ಯಾವುದೇ ತೊಂದರೆಗಳಿಗೆ ಅವಕಾಶವಾಗದಂತೆ ಮುನ್ನೆಚ್ಚರಿಕೆ ವಹಿಸಿ ಎಂದರು.

ಜನತೆ ತಮ್ಮ ಸಮಸ್ಯೆ ಅಹವಾಲು ಪರಿಹರಿಸಿಕೊಳ್ಳಲು ಕಚೇರಿಗೆ ಬರುವ ಬದಲು ಅವರು ಇರುವ ಬಳಿಗೆ ಅಧಿಕಾರಿಗಳೊಂದಿಗೆ ತೆರಳಿ ಜನಸ್ಪಂದನ ಕಾರ್ಯಕ್ರಮಗಳನ್ನು ನಡೆಸಲಾಗುತ್ತಿದೆ. ಇಂತಹ ಕಾರ್ಯಕ್ರಮಗಳಲ್ಲಿ ಜನರಿಂದ ಸಲ್ಲಿಕೆಯಾದ ಅಹವಾಲುಗಳಿಗೆ ಶೀಘ್ರ ಪರಿಹಾರ ಸಿಗಬೇಕು. ಮುಂದಿನ ಕಾರ್ಯಕ್ರಮದ ವೇಳೆಗೆ ಅಧಿಕಾರಿಗಳು ಸಮಸ್ಯೆಗಳನ್ನು ಇತ್ಯರ್ಥಗೊಳಿಸಿರಬೇಕು ಎಂದು ಜಿಲ್ಲಾಧಿಕಾರಿಯವರು ತಿಳಿಸಿದರು.

ಸಭೆ ಆರಂಭವಾಗುತ್ತಿದ್ದಂತೆಯೇ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಪ್ರತಿಯೊಬ್ಬರಿಂದ ಅಹವಾಲು ಆಲಿಸಿದರು. ಗ್ರಾಮದ ವಾಲ್ಮೀಕಿ ಸಮುದಾಯ ಭವನ ಕಾಮಗಾರಿ




ಅಪೂರ್ಣಗೊಂಡಿದೆ. ಮೊದಲನೆ ಅಂತಸ್ತು ಪೂರ್ಣಗೊಳ್ಳಬೇಕಿದ್ದು, ಕುಡಿಯುವ ನೀರು, ಶೌಚಾಲಯ ವ್ಯವಸ್ಥೆಯನ್ನು ಕಲ್ಪಿಸಿಕೊಡಬೇಕೆಂದು ಸ್ಥಳೀಯ ಗ್ರಾಮಸ್ಥರು ಮನವಿ ಮಾಡಿದರು. ಸಭೆಯಲ್ಲಿಯೇ ಇದ್ದ ಅಧಿಕಾರಿಗಳಿಗೆ ತ್ವರಿತವಾಗಿ ಕಾಮಗಾರಿ ಆರಂಭಿಸಬೇಕು. ಹೆಚ್ಚುವರಿ ಅನುದಾನ ಪಡೆಯಲು ಮುಂದಿನ ಕ್ರಮ ವಹಿಸಬೇಕೆಂದು ಜಿಲ್ಲಾಧಿಕಾರಿಯವರು ಸೂಚಿಸಿದರು.

ಸಭೆಯಲ್ಲಿ ಸ್ಥಳೀಯರು ದಾರಿ, ಸಾರ್ವಜನಿಕ ರಸ್ತೆ, ಕೆರೆ ಒತ್ತುವರಿ ಮಾಡಿಕೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿಗಳ ಗಮನಸೆಳೆದರು. ಈ ಬಗ್ಗೆ ಸ್ಪಂದಿಸಿದ ಜಿಲ್ಲಾಧಿಕಾರಿಯವರು ಒಂದು ತಿಂಗಳೊಳಗೆ ಈ ಬಗ್ಗೆ ತಹಶೀಲ್ದಾರರು, ಭೂ ದಾಖಲೆಗಳ ಇಲಾಖೆ ಅಧಿಕಾರಿಗಳು ಸಮೀಕ್ಷೆ ನಡೆಸಿ ಒತ್ತುವರಿ ತೆರವಿಗೆ ಮುಂದಾಗಲು ಕಟ್ಟುನಿಟ್ಟಿನ ಸೂಚನೆ ನೀಡಿದರು. ಬಿಸಲವಾಡಿ, ಅಮಚವಾಡಿ, ಎಣ್ಣೆಹೊಳೆ ಗ್ರಾಮ ಹಾಗೂ ಚೆನ್ನಪ್ಪನಪುರ ದೇವಾಲಯದ ಬಳಿ ಅಕ್ರಮವಾಗಿ ಗಣಿಗಾರಿಕೆ ನಡೆಸಲಾಗುತ್ತಿದೆ. ಇದನ್ನು ತಡೆಯಬೇಕೆಂಬ ಗ್ರಾಮಸ್ಥರೋರ್ವರು ಪ್ರಸ್ತಾಪಿಸಿದ ವೇಳೆ ಜಿಲ್ಲಾಧಿಕಾರಿಯವರು ಗಣಿ ಮತ್ತು ಭೂ ವಿಜ್ಞಾನ ಇಲಾಖೆ ಅಧಿಕಾರಿಗಳು ಕೂಡಲೇ ಸ್ಥಳಕ್ಕೆ ಭೇಟಿ ನೀಡಿ ಅನಧಿಕೃತವಾಗಿ ಗಣಿಗಾರಿಕೆ ನಡೆಯುತ್ತಿದ್ದಲ್ಲಿ ನಿಲ್ಲಿಸಬೇಕು. ಒಂದು ವಾರದೊಳಗೆ ದೂರಿಗೆ ಸಂಬಂಧಿಸಿದಂತೆ ಪರಿಶೀಲಿಸಿ ವರದಿ ನೀಡಬೇಕು. ಇಲ್ಲವಾದಲ್ಲಿ ನಾನೇ ಖುದ್ದು ಭೇಟಿ ನೀಡಿ ಪರಿಶೀಲಿಸುತ್ತೇನೆ ಎಂದರು.

ಸಮುದಾಯ ಭವನದ ಆವರಣದಲ್ಲಿ ಅಪೂರ್ಣವಾಗಿರುವ ಬಯಲು ರಂಗಮಂದಿರವನ್ನು ಪೂರ್ಣಗೊಳಿಸಬೇಕು ಎಂದು ಹಿರಿಯ ಕಲಾವಿದರಾದ ಘಟಂ ಕೃಷ್ಣ ಅವರು ಜಿಲ್ಲಾಧಿಕಾರಿಯವರಲ್ಲಿ ಮನವಿ ಮಾಡಿದರು. ಈ ಸಂಬಂಧ ತಹಶೀಲ್ದಾರ್ ಅವರಿಂದ ಮಾಹಿತಿ ಪಡೆದ ಜಿಲ್ಲಾಧಿಕಾರಿಯವರು ಮುಂದಿನ ಕಾಮಗಾರಿ ನಿರ್ವಹಣೆಗೆ ಕ್ರಮ ತೆಗೆದುಕೊಳ್ಳುವಂತೆ ಸೂಚಿಸಿದರು. ಸಭೆಯ ಬಳಿಕ ಜಿಲ್ಲಾಧಿಕಾರಿಯವರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದರು.

ಹರದನಹಳ್ಳಿ ಹೋಬಳಿಯಲ್ಲಿ ಪಶು ಆಸ್ಪತ್ರೆ ಇಲ್ಲವಾದ್ದರಿಂದ ವೆಂಕಟಯ್ಯನಛತ್ರಕ್ಕೆ ಹೋಗಬೇಕಿದೆ. ಇಲ್ಲಿಯೇ ಆಸ್ಪತ್ರೆ ನಿರ್ಮಾಣವಾದರೆ ಅನುಕೂಲವಾಗಲಿದೆ ಎಂಬ ಮನವಿಗೆ ಪ್ರತಿಕ್ರಿಯಿಸಿದ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಜಿಲ್ಲಾ ಉಸ್ತುವಾರಿ ಸಚಿವರು ಪಶುಸಂಗೋಪನೆ ಇಲಾಖೆಯ ಸಚಿವರೂ ಆಗಿರುವುದರಿಂದ ಅವರ ಗಮನಕ್ಕೆ ಈ ವಿಷಯ ತರಲಾಗುವುದು. ಪಶು ಆಸ್ಪತ್ರೆಯ ಅಗತ್ಯ ಕುರಿತು ಅಧಿಕಾರಿಗಳಿಂದ ಪರಿಶೀಲಿಸಿ ವರದಿ ಪಡೆಯಲಾಗುವುದು ಎಂದರು.

ಸ್ಥಳೀಯ ಆಸ್ಪತ್ರೆಗೆ ವೈದ್ಯರು, ನರ್ಸ್‌ಗಳ ನೇಮಕ, ದಿವ್ಯಲಿಂಗೇಶ್ವರ ದೇವಸ್ಥಾನದ ಅಭಿವೃದ್ಧಿ ಕಾಮಗಾರಿ, ಹೆದ್ದಾರಿ, ಇತರೆ ರಸ್ತೆಗಳ ದುರಸ್ತಿ, ಕೆಎಸ್‌ಆರ್‌ಟಿಸಿ ಬಸ್ಸುಗಳ ಸೇವೆ, ಕಾಲುವೆ ನಿರ್ಮಾಣ, ಅಕ್ರಮ ಮದ್ಯ ಮಾರಾಟ ತಡೆ, ಖಾತೆ, ಇ-ಸ್ವತ್ತು ವಿಳಂಬ ಸೇರಿದಂತೆ ಇನ್ನಿತರ ಸಮಸ್ಯೆಗಳ ಕುರಿತು ಜನರಿಂದ ಅಹವಾಲುಗಳು ಸಲ್ಲಿಕೆಯಾದವು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಆನಂದ್ ಪ್ರಕಾಶ್ ಮೀನಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪದ್ಮಿನಿ ಸಾಹು, ಉಪವಿಭಾಗಾಧಿಕಾರಿ ಮಹೇಶ್, ತಹಶೀಲ್ದಾರ್ ಬಸವರಾಜು, ತಾಲೂಕು ಪಂಚಾಯತ್ ಕಾರ್ಯನಿರ್ವಾಹಕಾಧಿಕಾರಿ ಪೂರ್ಣಿಮಾ ಸೇರಿದಂತೆ ಇನ್ನಿತರ ಅಧಿಕಾರಿಗಳು ಸಭೆಯಲ್ಲಿ ಇದ್ದರು.

# ಉಜ್ವಲ ಭವಿಷ್ಯವನ್ನು ರೂಪಿಸಿಕೊಂಡು ಸಮಾಜಕ್ಕೆ ಮಾರಕ




ಮಾಲೂರು: ಯುವ ಸಮುದಾಯ ಮದ್ಯಪಾನ, ಧೂಮಪಾನದಂತಹ ದುಶ್ಚಟಕ್ಕೆ ಬಲಿಯಾಗದೆ ಶೈಕ್ಷಣಿಕ ಸಮಯದಲ್ಲಿ ಸಮಯ ವ್ಯರ್ಥಮಾಡದೇ ತನ್ನ ಉಜ್ವಲ ಭವಿಷ್ಯವನ್ನು ರೂಪಿಸಿಕೊಂಡು ಸಮಾಜಕ್ಕೆ ಮಾರಕವಾಗುವ ದುಶ್ಚಟಗಳಿಗೆ ದೂರವಿರುವಂತೆ ಪೊಲೀಸ್ ಇನ್ಸೆಕ್ಟರ್ ವಸಂತ್ ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು. ಪಟ್ಟಣದ ಬಾಲಕಿಯರ ಪದವಿ ಪೂರ್ವ ಕಾಲೇಜು ವಿದ್ಯಾರ್ಥಿಗಳ ಸಹಯೋಗದಲ್ಲಿ ಮಾಲೂರು ಪೊಲೀಸ್ ಇಲಾಖೆಯಿಂದ ಆಯೋಜಿಸಿದ್ದ ಮಾದಕ ವಸ್ತುಗಳ ನಿಷೇಧ ಹಾಗೂ ವಿರೋಧ ದಿನಾಚರಣೆ 2024–25 ನೇ ಸಾಲಿನ ಜಾಥಾಗೆ ಪೊಲೀಸ್ ಇನ್ಸ್ಪೆಕ್ಟರ್ ವಸಂತ್ ಚಾಲನೆ ನೀಡಿದರು. ಪಟ್ಟಣ ಸೇರಿದಂತೆ ಗ್ರಾಮೀಣ ಭಾಗದಲ್ಲಿ ಮಾದಕ ದ್ರವ್ಯ ಸೇವನೆಗೆ ಹೆಚ್ಚಾಗಿ ಯುವಕರು ತುತ್ತಾಗುತ್ತಿದ್ದಾರೆ. ಮದ್ಯಪಾನ, ಧೂಮಪಾನ, ಗುಟುಕದಂತಹ ಸೇವನೆಯಿಂದ ವ್ಯಕ್ತಿಯ ದೈಹಿಕ, ಮಾನಸಿಕ, ಭಾವನಾತ್ಮಕ ಅಥವಾ ನಡವಳಿಕೆ ಸ್ಥಿತಿಯನ್ನು ಬದಲಾಯಿಸುವ ಮೂಲಕ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುತ್ತದೆ. ಹೆಣ್ಣು ಮಕ್ಕಳು ತಂದೆ ತಾಯಿ ಮತ್ತು ಶಾಲೆಯ ಶಿಕ್ಷಕರ ಮಾತು ಕೇಳಿ ಒಳ್ಳೆಯ ವಿದ್ಯಾಭ್ಯಾಸ ಪಡೆದುಕೊಳ್ಳಬೇಕು. ಇತ್ತೀಚೆಗೆ ದುಶ್ಚಟಗಳಿಗೆ ಯುವಕರು ಬಲಿಯಾಗುತ್ತಿದ್ದು, ದುಶ್ಚಟಗಳಿಂದ ದೂರವಿದ್ದು, ತಮ್ಮ ಅಮೂಲ್ಯ ಜೀವವನ್ನು ಹಾಳು ಮಾಡುಕೊಳ್ಳದೇ ಸುಖ ಜೀವನ ಮಾಡುವಂತೆ ಕರೆ ನೀಡಿದರು. ಪಟ್ಟಣದ ಪ್ರಮುಖ ರಸ್ತೆಗಳಲ್ಲಿ ಶಾಲಾ, ಕಾಲೇಜು ವಿದ್ಯಾರ್ಥಿಗಳು, ಪೊಲೀಸ್ ಸಿಬ್ಬಂದಿ ಮಾದಕ ವಸ್ತುಗಳ ನಿಷೇಧ ಹಾಗೂ ವಿರೋಧ ದಿನಾಚರಣೆ ಅಂಗವಾಗಿ ಬಿತ್ತಿ ಪತ್ರಗಳೊಂದಿಗೆ ಘೋಷಣೆಗಳನ್ನು ಕೂಗಿ ಸಾರ್ವಜನಿಕರಿಗೆ ಅರಿವು ಮೂಡಿಸಿದರು. ನಂತರ ಬಸ್ ನಿಲ್ದಾಣದಲ್ಲಿ ಸಾರ್ವಜನಿಕರಿಗೆ ದುಶ್ಚಟಗಳಿಂದ ದೂರವಿರುವಂತೆ ಪ್ರತಿಜ್ಞಾವಿಧಿ ಭೋದಿಸಿದರು.

ಈ ಸಂದರ್ಭದಲ್ಲಿ ಎ.ಎಸ್.ಐ ವರಲಕ್ಷ್ಮೀ, ನಾರಾಯಣಸ್ವಾಮಿ, ಮುನೇಗೌಡ, ಯಶವಂತರಾವ್, ಮಂಜುನಾಥ್, ಅಶೋಕ್ ಪ್ರಿನ್ಸಿಪಾಲ ಪಿ.ವೈ.ಮಂಜುಳ, ಶಿಕ್ಷಕರಾದ ಆರ್.ವೆಂಕಟೇಶ್ , ಡಾ.ಜಿ.ಹನುಮಪ್ಪ, ಕೆ.ರವೀಂದ್ರ, ಶಂಕರಪ್ಪ , ಕನ್ನಡಪರ ಹೋರಾಟಗಾರ ಸಿ.ಎನ್.ನವೀನ್, ಆಟೋ ಮಂಜು ಸೇರಿದಂತೆ ಹಲವಾರು ವಿದ್ಯಾರ್ಥಿಗಳು, ಶಿಕ್ಷಕ ವೃಂದ ಹಾಜರಿದ್ದರು.

ವರದಿ: ಗೋಪಾಲಕೃಷ್ಣ, ಕೋಲಾರ




ಬಸ್ ನಿಲ್ಲುವ ಫಲಕ ಇದೆ.. ಬಸ್ ನಿಲ್ಲುವ ಭಾಗ್ಯವಿಲ್ಲ.. ಪಡವಗೋಡ್. ಹೊಂಕೇರಿ. ಮಾರುತಿ ನಗರ. ಈ ಭಾಗದ ಸಾಕಷ್ಟು ವಿದ್ಯಾರ್ಥಿಗಳು ಸಾಗರ ಸಿರಿವಂತೆ ಶಾಲೆ ಕಾಲೇಜ್ ಹೋಗಲು ಈ ಬಸ್ ನಿಲ್ದಾಣದ ಸ್ಥಳದಲ್ಲಿ. ನಿಂತು ಕೈ ಮಾಡಿದರೂ ಬಸ್ ನಿಲ್ಲಿಸದೆ ಹಾಗೆ ಹೋಗುವುದಲ್ಲದೆ ಬೇಜವಾಬ್ದಾರಿ ತೋರುತ್ತಿದ್ದಾರೆ ಹಾಗೂ ಈ ಸ್ಥಳದಲ್ಲಿ ನಾಡ ಕಚೇರಿ. ಕೃಷಿ ಇಲಾಖೆ. ಕೆನರಾ ಬ್ಯಾಂಕ್ ಇರುವುದರಿಂದ ಸಾರ್ವಜನಿಕರ ಅನುಕೂಲಕ್ಕಾಗಿ ಮುಖ್ಯವಾಗಿ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಇದಕ್ಕೆ ಸಂಬಂಧ ಪಟ್ಟ ಅಧಿಕಾರಿಗಳು ಗಮನ ಹರಿಸಿ ಬಸ್ ನಿಲುಗಡೆ ಭಾಗ್ಯ ದೊರಕಿಸಿಕೊಡಬೇಕು..

ವರದಿ: ಗಣಪತಿ ಭಂಡಾರಿ

# ಸಾರ್ವಜನಿಕರ ದೂರು ಅಹವಾಲುಗಳನ್ನು ಸ್ವೀಕಾರ ಮಾಡಿ

ಕೆ.ಆರ್.ಪೇಟೆ: ಸಾರ್ವಜನಿಕರ ದೂರು ಅಹವಾಲುಗಳನ್ನು ಸ್ವೀಕಾರ ಮಾಡಿ ಅವರ ಸಮಸ್ಯೆಗಳನ್ನು ಸ್ಥಳದಲ್ಲೇ ಅಥವಾ ಅತಿ ಶೀಘ್ರವಾಗಿ ಪರಿಹರಿಸುವ ಕಾರ್ಯಕ್ರಮವೇ ಜನ ಸ್ಪಂದನಾ ಕಾರ್ಯಕ್ರಮ. ಆಗಮಿಸಿರುವ ಸಾರ್ವಜನಿಕರು ಈ ಕಾರ್ಯಕ್ರಮವನ್ನು ಸದುಪಯೋಗ ಪಡಿಸಿಕೊಳ್ಳಬೇಕು ಎಂದು ಶಾಸಕ ಹೆಚ್.ಟಿ.ಮಂಜು ಹೇಳಿದರು.

ತಾಲ್ಲೂಕಿನ ಬೂಕನಕೆರೆ ಗ್ರಾಮದಲ್ಲಿರುವ ಸಮುದಾಯ ಭವನದಲ್ಲಿ ನಡೆದ ಜನ ಸ್ಪಂದನಾ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಜಿಲ್ಲೆಯಲ್ಲಿ ಕ್ರಿಯಾಶೀಲ ಜಿಲ್ಲಾಧಿಕಾರಿ ಹಾಗೂ ತಹಸಿಲ್ದಾರ್ ಇದ್ದರು ತಾಲ್ಲೂಕು ಮಟ್ಟದ ಕಂದಾಯ ಇಲಾಖೆಯ ಕೆಲ ಸಿಬ್ಬಂದಿಗಳ ಅಸಡ್ಡೆಯಿಂದ, ಕೆಲವು ಸಂದರ್ಭದಲ್ಲಿ ಸಾರ್ವಜನಿಕರು ಮಾಹಿತಿ ನಿರ್ಲಕ್ಷ್ಯ ಮಾಡದೇ ಶೀಘ್ರವೇ ಸ್ಪಂದಿಸಿ, ಸಮಸ್ಯೆಗಳನ್ನು ನಿಯಮಾನುಸಾರ ಬಗೆಹರಿಸಲು ಮುಂದಾಗಬೇಕು ಎಂದು ಹೇಳಿದರು.

ಜಿಲ್ಲಾಧಿಕಾರಿ ಡಾ:ಕುಮಾರ್ ಮಾತನಾಡಿ ಸರ್ಕಾರದ ನಿರ್ದೇಶನದಂತೆ ಜನ ಸ್ಪಂದನಾ ಕಾರ್ಯಕ್ರಮವನ್ನು ಕಳೆದ ವರ್ಷದಿಂದಲೇ ಪ್ರಾರಂಭಿಸ ಲಾಗಿದ್ದು, ಎಲ್ಲಾ ತಾಲೂಕು ಹಾಗೂ ಜಿಲ್ಲಾ ಮಟ್ಟ ದಲ್ಲಿ ಆಯೋಜಿಸುವು ದರೊಂದಿಗೆ ಜನರ ಸಮಸ್ಯೆಗಳನ್ನು ಪರಿಹರಿಸುವುದು ಈ ಕಾರ್ಯಕ್ರಮದ ಮೂಲ ಉದ್ದೇಶವಾಗಿದೆ. ಜನರು ಸಲ್ಲಿಸಿದ ಅರ್ಜಿಗಳಿಗೆ ಅಲ್ಪಕಾಲದಲ್ಲಿಯೇ ಪರಿಹಾರ ಒದಗಿಸಲಾಗುವುದು .ಅಲ್ಲದೇ ತಾವು ಸಲ್ಲಿಸಿದ ಅರ್ಜಿಗಳ ಕುರಿತಂತೆ ಯಾವ ಕ್ರಮಗಳನ್ನು ಕೈಗೊಂಡಿದ್ದಾರೆ ಎಂಬುದನ್ನು ಜನರು ಆನ್‌ಲೈನ್ ಮೂಲಕ




ಕೊರತೆಯಿಂದಾಗಿ ಅನೇಕ ಸಮಸ್ಯೆಗಳು ಉಂಟಾಗುತ್ತದೆ. ಸಮಸ್ಯೆಗಳು ಅಣ್ಣ–ತಮ್ಮಂದಿರಲ್ಲಿ ಆಸ್ತಿ ವ್ಯಜ್ಯವನ್ನು ಉಂಟು ಮಾಡುತ್ತದೆ 100 ಕ್ಕೆ 70 ಭಾಗದಷ್ಟು ಆಸ್ತಿಗಳು ಇನ್ನೂ ಕೂಡ ಪೌತಿ ಖಾತೆಗಳು ಆಗಿಲ್ಲ.ಆಸ್ತಿ ಭಾಗವಾಗದೇ ತಾತ, ಮುತ್ತಾತ ನ ಹೆಸರಿನಲ್ಲೇ ಇರುವುದು, ಕುಟುಂಬದವರು ಒಟ್ಟಿಗೆ ಸೇರಿ ಪೌತಿ ಖಾತೆ ಮಾಡಿಸಿಕೊಳ್ಳದೇ ಇರುವುದು. ಇದಕ್ಕೆ ಅನೇಕ ಕಾರಣಗಳಿಂದಲ್ಲೆ ಹೆಚ್ಚು ಸಾರ್ವಜನಿಕರು ಸರ್ಕಾರಿ ಕಚೇರಿಗಳಿಗೆ ಅಲೆದಾಡುತ್ತಿದ್ದಾರೆ ಈ ಒಂದು ಸಮಸ್ಯೆ ಅಕ್ರಮ ಆಸ್ತಿಗಳಿಕೆಗೆ ದಾರಿ ಮಾಡಿಕೊಡಬಹುದು ಎಂದು ಅದಕ್ಕಾಗಿ ಸರ್ಕಾರ ಸಾರ್ವಜನಿಕರ ಕಚೇರಿಗಳಿಗೆ ಅಲೆದಾಟ ತಪ್ಪಿಸುವ ದೂರ ದೃಷ್ಟಿಯಿಂದಲೇ ಜಿಲ್ಲಾ,ತಾಲ್ಲೂಕು ಹಾಗೂ ಹೋಬಳಿ ಮಟ್ಟದಲ್ಲಿ ಜನಸ್ಪಂದನಾ ಕಾರ್ಯಕ್ರಮ ಆಯೋಜಿಸುವ ಮೂಲಕ ಜನರ ಸಮಸ್ಯೆಗಳನ್ನ ಸ್ಥಳದಲ್ಲೆ ಬಗೆಹರಿಸುವ ಉಪಯುಕ್ತ ಕಾರ್ಯಕ್ರಮದ ಬಗ್ಗೆ ಸಾಮಾಜಿಕ ಕ್ಷೇತ್ರದಲ್ಲಿ ಕೆಲಸ ಮಾಡುವಂತಹ ಕಾರ್ಯಕರ್ತರು ಸಾರ್ವಜನಿಕರಿಗೆ ತಿಳಿಸಬೇಕಿತ್ತು ಆದರೆ ಸ್ಥಳೀಯ ಅಧಿಕಾರಿಗಳ ಬೇಜವಾಬ್ದಾರಿತನದಿಂದ ಈ ಕಾರ್ಯಕ್ರಮ ಹೆಚ್ಚು ಪ್ರಚಾರವಾಗಿಲ್ಲ ಎಂದು ಆರೋಪಿಸಿ ಬೇಸರ ವ್ಯಕ್ತಪಡಿಸಿದರು.ಸರ್ಕಾರಿ ಆಸ್ತಿಗಳನ್ನು ರಕ್ಷಿಸುವುದು ಅಧಿಕಾರಿಗಳ ಕರ್ತವ್ಯವಾಗಿದೆ. ಸರ್ಕಾರದ ಆಸ್ತಿಗಳ ವ್ಯಾಪ್ತಿಯನ್ನು ಮೊದಲು ಗುರುತು ಮಾಡಿಕೊಳ್ಳುವುದು ಅತ್ಯವಶ್ಯಕವಾಗಿದೆ.ಜನಸ್ಪಂದನಾ ಕಾರ್ಯಕ್ರಮದಲ್ಲಿ ನೀಡಿರುವ ಅಹವಾಲುಗಳನ್ನು ಇಲಾಖಾ ಅಧಿಕಾರಿಗಳು ಪರಿಶೀಲಿಸಲು ಅನುಕೂಲವಾಗುವಂತೆ ಐ.ಪಿ.ಜಿ.ಆರ್.ಎಸ್‌ನಲ್ಲಿ ಅಪ್‌ಲೋಡ್ ಮಾಡಲಾಗುವುದು. ಇದರಿಂದ ಜನರು ಕಚೇರಿಗೆ ಅಲೆದಾಡುವುದನ್ನು ತಪ್ಪಿಸುವುದರ ಜೊತೆಗೆ ಆನ್‌ಲೈನ್ ಮೂಲಕ ಪರಿಶೀಲಿಸಲು ಅನುಕೂಲ ಮಾಡಿ ಕೊಡಲಾಗುತ್ತಿದೆ.ಸಾರ್ವಜನಿಕರು ಜನ ಸ್ಪಂದನಾ ಕಾರ್ಯಕ್ರಮದ ಪ್ರಯೋಜನ ಪಡೆದುಕೊಳ್ಳಬೇಕು.ಜನಸ್ಪಂದನ ಸಭೆಯಲ್ಲಿ ಬಂದ ಅರ್ಜಿಗಳ ಸಮಸ್ಯೆಗಳನ್ನು ಜಿಲ್ಲಾ ಮಟ್ಟದಲ್ಲಿ ಅಥವಾ ತಾಲೂಕು ಮಟ್ಟದಲ್ಲಿ ಬಗೆಹರಿಸುವಂತಿದ್ದಲ್ಲಿ ಕೂಡಲೇ ಅವುಗಳನ್ನು ಇತ್ಯರ್ಥಪಡಿಸಲು ಕ್ರಮ ಕೈಗೊಳ್ಳಲಾಗುವುದು. ಕೆಲವೊಮ್ಮೆ ದೊಡ್ಡ ಸಮಸ್ಯೆಗಳಿದ್ದಲ್ಲಿ ಅಥವಾ ಸರಕಾರದ ಅನುದಾನದ ಅವಶ್ಯಕತೆ ಇದ್ದಲ್ಲಿ ಅಂತಹವುಗಳನ್ನು ಸರಕಾರದ ಮಟ್ಟದಲ್ಲಿ ಬಗೆಹರಿಸಲು ಕಳುಹಿಸಿ ಕೊಡಲಾಗುವುದು ಎಂದರು.

ತಾಲೂಕು ರೈತ ಸಂಘ ಹಿರಿಯ ಮುಖಂಡ ಮುದುಗೆರೆ ರಾಜೇಗೌಡ ಮಾತನಾಡಿ ಕಳೆದ ಜನಸಂಪರ್ಕ ಸಭೆ ಸಭೆಯಲ್ಲಿ ಹಲವು ಸಮಸ್ಯೆಗಳ ಬಗ್ಗೆ ಮನವಿ ತಮ್ಮಗೆ ಮಾಡಲಾಗಿತ್ತು ಆದರೆ ಇದುವರೆಗೂ ಯಾವ ಸಮಸ್ಯೆಗಳು ಬಗೆ ಗಮನ ಹರಿಸಿಲ್ಲ.ಅದರು ಮತ್ತೊಮ್ಮೆ ಈ ಉಪಯುಕ್ತ ಸಭೆಯಲ್ಲಿ ಮನವಿ ಮಾಡುತ್ತಿದ್ದೇವೆ ನಮ್ಮ ಸಾರ್ವಜನಿಕರು ಮತ್ತು ಜಾನುವಾರುಗಳ ರಕ್ಷಣೆಗಾಗಿ ತಾಲೂಕಿನಲ್ಲಿರುವ ಪ್ರತಿ ನಾಲೆಗಳಿಗೆ ರಕ್ಷಣಾ ಕಲ್ಲು ಅಳವಡಿಸಿ ಎಂದು ಮನವಿ ಮಾಡಿದರು ಈ ದಿನದ ವರೆಗೂ ಅದರ ಬಗ್ಗೆ ಕ್ರಮವಹಿಸಿಲ್ಲ. ಸರ್ಕಾರ ಬಡ ರೈತರಿಗೆ ಅನುಕೂಲವಾಗಲಿ ಎಂದು ಕೃಷಿ ಇಲಾಖೆಯಲ್ಲಿ ಅರ್ಹ ರೈತರಿಗೆ ಬಾಡಿಗೆಗೆ ಸಲ್ಲಬೇಕಿದ್ದ ಕೃಷಿ ಉಪಕರಣ ನೀಡುತ್ತಿಲ್ಲ. ತೋಟಗಾರಿಕೆ ಇಲಾಖೆ ಅಕ್ಕಿಮಂಚನಹಳ್ಳಿ ಬೋರಮ್ಮ ರವರಿಗೆ ಸಬ್ಸಿಡಿಯಲ್ಲಿ ಟ್ರ್ಯಾಕ್ಟರ್ ಖರೀದಿಸಿದ್ದಾರೆ ಆದರೆ ಸ್ಥಳೀಯ ತೋಟಗಾರಿಕೆ ಸಹಾಯಕ ನಿರ್ದೇಶಕ ಸಬ್ಸಿಡಿ ಕಲ್ಪಿಸಲು ಲಂಚಕ್ಕೆ ಬೇಡಿಕೆ ಇಟ್ಟಿದ್ದಾರೆ ಇದರ ಬಗ್ಗೆ ಸೂಕ್ತ ತನಿಖೆ ನಡೆಸಿ ಎಂದು ಹಲವು ಆ ಬಾರಿ ಚಳುವಳಿ ನಡೆಸಿದರು ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮ ಜರುಗಿಸಿಲ್ಲ. ಬೂಕನಕೆರೆ ಗ್ರಾಮದಲ್ಲಿರುವ ಸಾರ್ವಜನಿಕ ಆಸ್ಪತ್ರೆ ವೈದ್ಯರ ಕೊರತೆ ಹಾಗೂ ಕೊಠಡಿಗಳು ಸ್ವಚ್ಛತೆ ಇಲ್ಲದೆ ಗಬ್ಬೆದ್ದು ನಾರುತಿದೆ. ಬಣ್ಣೇನಹಳ್ಳಿ ಗ್ರಾಮದ ಸಮೀಪವಿರುವ ನಿರ್ಮಾಣಗೊಂಡಿರುವ ಮೆಗಾ ಫುಡ್ ಪಾರ್ಕ್ ಕಾರ್ಖಾನೆಗಳ ತ್ಯಾಜ್ಯ ನೀರು ಹಾಗೂ ಘನ ತ್ಯಾಜ್ಯವನ್ನು ಸಂಸ್ಕರಣೆ ಮಾಡದೇ, ರೈತರ ಜಮೀನಿಗೆ ಹಾಗೂ ಕೆರೆ ಕಟ್ಟೆಗಳಿಗೆ ನೇರವಾಗಿ ಬಿಡಲಾಗುತ್ತಿದೆ ಹಲವು ಬಾರಿ ಪರಿಸರ ಮಾಲಿನ್ಯ ಅಧಿಕಾರಿಗಳಿಗೆ ಮನವಿ ಮಾಡಿದರು ಪ್ರಯೋಜನವಾಗುತ್ತಿಲ್ಲ.ಮಾಕವಳ್ಳಿ ಗ್ರಾಮದಲ್ಲಿರುವ ಕೋರಮಂಡಲ ಸಕ್ಕರೆ ಕಾರ್ಖಾನೆಯ ಒಟ್ಟು ಮೌಲ್ಯ ಮತ್ತು ವಾರ್ಷಿಕ ಆದಾಯ ಆದರಿಸಿ ಕಂದಾಯ ಸ್ವೀಕರಿಸದೆ ಕಾರ್ಖಾನೆಯ ಕೈಗೊಂಬೆಯಂತೆ ಅವರ ಅನುಗುಣವಾಗಿ ಕಂದಾಯ ಸ್ವೀಕರಿಸಿ ಸರ್ಕಾರಕ್ಕೆ ವಂಚಿಸುತ್ತಿರುವ ಪ್ರಸ್ತುತ ಮಾಕವಳ್ಳಿ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಈ ವಿಚಾರದ ಬಗ್ಗೆ ಬೇಜವಾಬ್ದಾರಿ ತೋರಿಸಿತ್ತಿರುವ ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಶಿಸ್ತು ಕಠಿಣ ಕ್ರಮ ಜರುಗಿಸಿ ಸೂಕ್ತ ತನಿಖೆ ನಡೆಸಬೇಕು ಎಂದು ಗಂಭೀರವಾಗಿ ಆರೋಪಿ ಮನವಿ ಮಾಡಿದರು.

ಕಾರ್ಯಕ್ರಮದಲ್ಲಿ 156 ಅರ್ಜಿ ಸ್ವೀಕರಿಸಿ, ಸ್ಥಳದಲ್ಲೇ ಕೆಲ ಸಾರ್ವಜನಿಕರ ಸಮಸ್ಯೆಗಳನ್ನ ಬಗೆಹರಿಸಲಾಯಿತು. ಪೌತಿ ಖಾತೆ ಇ –ಸ್ವತ್ತು ಸೇರಿದಂತೆ ವಿವಿಧ ಹಕ್ಕು ಪತ್ರಗಳನ್ನ ಅರ್ಹ ಸಾರ್ವಜನಿಕರಿಗೆ ವಿತರಿಸಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಶೇಕ್ ತನ್ವಿರ್ ಆಸೀಫ್,ಡಿ.ವೈ.ಎಸ್.ಪಿ ಸುಮಿತ್,ಉಪ ವಿಭಾಗಧಿಕಾರಿ ಎಲ್.ಎಂ ನಂದೀಶ್, ತಹಶೀಲ್ದಾರ್ ನಿಸರ್ಗಪ್ರಿಯ,ಕಾರ್ಯ ನಿರ್ವಹಣಾಧಿಕಾರಿ ಸತೀಶ್,ಬೂಕನಕೆರೆ ಗ್ರಾ.ಪಂ ಅಧ್ಯಕ್ಷ ಶ್ಯಾಮ್ ಪ್ರಸಾದ್,ತಾ.ಪಂ ಮಾಜಿ ಸದಸ್ಯ ಬೂಕನಕೆರೆ ಹುಲ್ಲೆಗೌಡ, ಯುವ ಜನತಾದಳ ರಾಜ್ಯ ಪ್ರಧಾನ ಕಾರ್ಯದರ್ಶಿ ಕುರುಬಹಳ್ಳಿ ನಾಗೇಶ್, ರೈತ ಸಂಘದ ಹಿರಿಯ ಮುಖಂಡ ಮುದುಗೆರೆ ರಾಜೇಗೌಡ,ಗಂಜೀಗೆರೆ ಗ್ರಾ.ಪಂ ಅಧ್ಯಕ್ಷ ಪರಮೇಶ್, ರಾಜಶ್ವ ನಿರೀಕ್ಷಕರಾದ ಜ್ಞಾನೇಶ್, ಚಂದ್ರಕಲಾ, ಗೋಪಾಲಕೃಷ್ಣ,ನರೇಂದ್ರ,ಶಾಸಕರ ಆಪ್ತ ಸಹಾಯಕ ಅರಳಕುಪ್ಪೆ ಪ್ರತಾಪ್,ಕುಮಾರಸ್ವಾಮಿ,ಸೇರಿದಂತೆ ತಾಲ್ಲೂಕು ಮಟ್ಟದ ಅಧಿಕಾರಿಗಳು ಸಾರ್ವಜನಿಕರು ಸೇರಿದಂತೆ ಉಪಸ್ಥಿತರಿದ್ದರು.

ಸುದ್ದಿಯೊಂದಿಗೆ ಮನು ಮಾಕವಳ್ಳಿ
ಕೆ.ಆರ್.ಪೇಟೆ

# ಮಡಿಕೇರಿ ಜೈಲು ಕೈದಿಗಳಿಗೆ ಡಾ.ಶಾಮ್ ರಾಕ್ ಪ್ರತಿಷ್ಠಾನದಿಂದ ಧ್ವನಿ ಚಿಕಿತ್ಸೆ ಕಾರ್ಯಾಗಾರ

ಬೆಂಗಳೂರು: ಡಾ.ಶಾನ್ ರಾಕ್ ಪ್ರತಿಷ್ಠಾನವು ಕರ್ನಾಟಕದ ಮಡಿಕೇರಿ ಜಿಲ್ಲಾ ಕಾರಾಗೃಹದ ಕೈದಿಗಳಿಗೆ ಯೋಗಕ್ಷೇಮ/ಆರೋಗ್ಯ ಮತ್ತು ಆಂತರಿಕ ನೆಮ್ಮದಿಯನ್ನು ಉತ್ತೇಜಿಸುವ ಉಪಕ್ರಮವಾಗಿ, ಧ್ವನಿ ಚಿಕಿತ್ಸೆ (ಸೌಂಡ್ ಹೀಲಿಂಗ್) ಕಾರ್ಯಾಗಾರವನ್ನು ಕರ್ನಾಟಕದ ಮಡಿಕೇರಿ ಜಿಲ್ಲಾ ಕಾರಾಗೃಹದಲ್ಲಿ "ಸೋನಿಕ್ ಸೊಲೇಸ್ 5.0' ಶೀರ್ಷಿಕೆಯಡಿಯಲ್ಲಿ ಆಯೋಜಿಸಿತ್ತು.

"ನಿಮ್ಮೊಳಗೆ ಹಿತವನ್ನು ಕಂಡುಕೊಳ್ಳಿ, ದೇಹ ಮತ್ತು ಆತ್ಮಗಳ ಸಶಕ್ತೀಕರಣ, ಆರೈಕೆ, ಮನಸ್ಸುಗಳ ಚಿಕಿತ್ಸೆಗಾಗಿ ಧ್ವನಿ ಚಿಕಿತ್ಸೆ" ಶಿರೋನಾಮೆಯಡಿಯಲ್ಲಿ ಪ್ರತಿಷ್ಠಾನದ ಸಂಸ್ಥಾಪಕ ಮತ್ತು ಆಡಳಿತ ನಿರ್ದೇಶಕ ಡಾ.ಶಾಮ್ ರಾಕ್ ಮತ್ತು ಕುಮಾರಿ ಶಿಲ್ಪಿ ದಾಸ್ ಕಾರ್ಯಾಗಾರದ ನೇತೃತ್ವ ವಹಿಸಿದ್ದರು.ಇಬ್ಬರೂ ಕೂಡ ಪ್ರಸಿದ್ಧ ಧ್ವನಿ ಚಿಕಿತ್ಸಕರು ಮತ್ತು ಸ್ಫೂರ್ತಿದಾಯಕ ವ್ಯಕ್ತಿಗಳಾಗಿದ್ದಾರೆ.




ಕಾರ್ಯಕ್ರಮವನ್ನು ವಿರಾಜಪೇಟೆ(ಕೊಡಗು) ಕ್ಷೇತ್ರದ ಶಾಸಕ ಎ.ಎಸ್.ಪೊನ್ನಣ್ಣನವರು ಗೋಣಿಕೊಪ್ಪಲು (ಮಡಿಕೇರಿ)ವಿನ ಪಂಚಾಯ್ತಿ ಅಧ್ಯಕ್ಷ ಶ್ರೀ ಪ್ರಮೋದ್ ಗಣಪತಿಯವರೊಂದಿಗೆ ಉದ್ಘಾಟಿಸಿದರು. ಕಾರಾಗೃಹದ ಉಪಾಧೀಕ್ಷಕ ಶ್ರೀ ಸಂಜಯ್ ದತ್ತಿ ಅಧ್ಯಕ್ಷತೆ ವಹಿಸಿದ್ದರು. 160ಕ್ಕೂ ಹೆಚ್ಚು ಕೈದಿಗಳು ಕಾರ್ಯಾಗಾರದಲ್ಲಿ ಭಾಗವಹಿಸಿ ನಿರ್ವಿಶೀಕರಣ, ಒತ್ತಡ ಕಡಿಮೆ ಮಾಡುವುದು ಮತ್ತು ಭಾವನೆಗಳ ನಿಯಂತ್ರಣಗಳನ್ನೊಳಗೊಂಡ ಧ್ವನಿ ಚಿಕಿತ್ಸೆಯ ಪ್ರಯೋಜನಗಳ ಅನುಭವ ಪಡೆದುಕೊಂಡರು.

ಕೈದಿಗಳ ಮೇಲೆ ಕಾರ್ಯಾಗಾರದ ಸಕಾರಾತ್ಮಕ ಪರಿಣಾಮಗಳ ಕುರಿತು ತಿಳಿಸಿಕೊಟ್ಟು ಮಾತನಾಡಿದ ಸಂಜಯ್

ದತ್ತಿಯವರು ಪ್ರತಿಷ್ಠಾನದ ಪ್ರಯತ್ನಗಳನ್ನು ಶ್ಲಾಘಿಸಿದರು.ಡಾ.ಶರಣ್ ರಾಕ್ ಮಾತನಾಡಿ ಅಪರಾಧಿ ನಡವಳಿಕೆ ಹೆಚ್ಚಾಗಿ ಅಂತರ್ಗತ ಲಕ್ಷಣವಾಗಿರದೇ ಸನ್ನಿವೇಶಾನುಸಾರ ಸಾಂದರ್ಭಿಕವಾಗಿ ಬೇರು ಬಿಟ್ಟಿರುತ್ತದೆ.

ಈ ಕಾರ್ಯಾಗಾರದಲ್ಲಿ ಪಾಲ್ಗೊಳ್ಳುವವರಿಗೆ ತಮ್ಮ ಭಾವನೆಗಳನ್ನು ನಿಭಾಯಿಸುವ ಮತ್ತು ಹಿಂದು ಮುಂದು ನೋಡದೇ ಆವೇಶಭರಿತ ಆಯ್ಕೆಗಳನ್ನು ತಪ್ಪಿಸುವ ಸಾಧನಗಳೊಂದಿಗೆ ಸಜ್ಜುಗೊಳಿಸಲಲಾಗುವುದು ಎಂದರು. ಇದೇ ರೀತಿಯ ಕಾರ್ಯಕ್ರಮಗಳನ್ನು ಬೆಂಗಳೂರಿನ ಪರಪ್ಪನ ಅಗ್ರಹಾರ ಜೈಲಿನಲ್ಲೂ ಆಯೋಜಿಸುವ ನಿಟ್ಟಿನಲ್ಲಿ ಗೃಹಸಚಿವರನ್ನು ಸಂಪರ್ಕಿಸುವ ಇಂಗಿತವನ್ನು ಡಾ.ಶರಣ್ ವ್ಯಕ್ತಮಾಡಿದರು.

ಡಾ.ಶರಣ್ ರಾಕ್ ಪ್ರತಿಷ್ಟಾನವು ಈ ಕಾರ್ಯಾಗಾರವನ್ನೂ ಹೊರತಾದ ವಿಸ್ತೃತ ಉದ್ದೇಶವನ್ನು ಹೊಂದಿದೆ. ಗ್ರಾಮೀಣ ಭಾಗದ ಆಸಕ್ತ ಕಲಾವಿದರನ್ನು ತರಬೇತುಗೊಳಿಸುವುದರ ಮೂಲಕ ಸಶಕ್ತೀಕರಿಸುವುದು ಮತ್ತು ಸಂಗೀತವನ್ನು ವೃತ್ತಿಯಾಗಿ ಅನುಸರಿಸಲು ಅವಕಾಶ ಒದಗಿಸುವ ಉದ್ದೇಶವನ್ನು ಹೊಂದಿದೆ.

ಗುಣಪಡಿಸುವಿಕೆ, ಕ್ರಿಯಾಶೀಲತೆ, ಶಾಂತಿ ಮತ್ತು ಸಮುದಾಯ ಪ್ರಜ್ಞೆ, ಸಂಗೀತ ಮತ್ತು ಧ್ವನಿ ಚಿಕಿತ್ಸೆಯನ್ನು ಉತ್ತೇಜಿಸಲು ಸಂಗೀತ ಶಕ್ತಿಯ ಮೇಲಿನ ನಂಬಿಕೆಯು ಕೂಡ ಪಾರ್ಕಿನ್ಸನ್ ಕಾಯಿಲೆ, ಮಕ್ಕಳಲ್ಲಿ ಗ್ರಹಿಕಾ ದೌರ್ಬಲ್ಯ (ಡಿಸ್ಲೆಕ್ಸಿಯಾ) ಮತ್ತಿತರ ಸಮಸ್ಯೆಗಳನ್ನು ಹೊಂದಿರುವ ರೋಗಿಗಳಿಗೆ ಸಹಾಯಕವಾಗಲಿದೆ. ಹೀಗಾಗಿ ಕ್ಯಾನ್ಸರ್ ರೋಗಿಗಳು, ಸರ್ಕಾರಿ ಶಾಲೆಗಳು ಮತ್ತು ಹಿರಿಯ ನಾಗರಿಕರ ವಸತಿಗಳು ಸೇರಿದಂತೆ ವಿವಿಧ ಸಮುದಾಯಗಳಿಗೆ ಚಿಕಿತ್ಸಾ ಅಧಿವೇಶನಗಳನ್ನು ಮತ್ತು ತಾಳವಾದ್ಯ ವಾದಕರು ಮತ್ತು ನರ್ತಕರ ಸಂವಹನಾತ್ಮಕ ಸಮ್ಮೇಳನಗಳನ್ನು ಡಾ.ಶರಣ್ ರಾಕ್ ಪ್ರತಿಷ್ಟಾನವು ಆಯೋಜಿಸುತ್ತದೆ.

ಮುಂಜಾನೆ ವಾರ್ತೆ
ಕನ್ನಡ ದಿನಪತ್ರಿಕೆ
ಇ-ಪೇಪರ್: www.munjanevarth.com
ಗುರುವಾರ 27 ಜೂನ್ 2024
THURSDAY 27 June 2024

# ಬಿಜೆಪಿ-ಜೆಡಿಎಸ್ ಮೈತ್ರಿ ಮೈತ್ರಿಕೂಟದ ಸಂಸದ ಸ್ಥಾನದ ಅಭ್ಯರ್ಥಿಯಾಗಿದ್ದ ಎಸ್.ಬಾಲರಾಜು

ತಿ. ನರಸೀಪುರ:– ಬಿಜೆಪಿ–ಜೆಡಿಎಸ್ ಮೈತ್ರಿ ಮೈತ್ರಿಕೂಟದ ಸಂಸದ ಸ್ಥಾನದ ಅಭ್ಯರ್ಥಿಯಾಗಿದ್ದ ಎಸ್. ಬಾಲರಾಜು ಹಾಗೂ ವಿಧಾನಪರಿಷತ್ ಸದಸ್ಯ ವಿವೇಕನಂದರವರ ಪರವಾಗಿ ಚುನಾವಣೆಯಲ್ಲಿ ಶ್ರಮಿಸಿದ.

ತಿ.ನರಸೀಪುರ ಕ್ಷೇತ್ರದ ಜೆಡಿಎಸ್ ಮತ್ತು ಭಾಜಪ ಕಾರ್ಯಕರ್ತರು, ಮುಖಂಡರು ಹಾಗೂ ಮತದಾರರಿಗೆ ಕೃತಜ್ಞತೆ ಸಲ್ಲಿಸುತ್ತೇನೆ ಎಂದು ನಿಕಟ ಪೂರ್ವ ಶಾಸಕ ಎಂ.ಅಶ್ವಿನ್ ಕುಮಾರ್ ತಿಳಿಸಿದರು.

ಪಟ್ಟಣದ ಕಬಿನಿ ಅತಿಥಿಗೃಹದಲ್ಲಿ ಬಿಜೆಪಿ ಹಾಗೂ ಜೆಡಿಎಸ್ ಪಕ್ಷಗಳ ವತಿಯಿಂದ ನೆಡದ ಜಂಟಿ ಪತ್ರಿಕೆಗೋಷ್ಠಿ ಉದ್ದೇಶಿಸಿ ಮಾತನಾಡಿದ ಎಂ ಅಶ್ವಿನ್ ಕುಮಾರ್. ಚಾಮರಾಜನಗರ ಲೋಕಸಭಾ ಕ್ಷೇತ್ರದ ಅಭ್ಯರ್ಥಿ ಎಸ್. ಬಾಲರಾಜು ಹಾಗೂ ವಿಧಾನ ಪರಿಷತ್ತಿನ ದಕ್ಷಿಣ ಶಿಕ್ಷಕರ ಕ್ಷೇತ್ರದ ವಿವೇಕಾನಂದರವರ ಪರವಾಗಿ ಚುನಾವಣೆಯಲ್ಲಿ ಕೆಲಸ ಮಾಡಿದ ಎನ್.ಡಿ.ಎ.ಮೈತ್ರಿ ಕೂಟದ ಅಭ್ಯರ್ಥಿಗಳಿಗೆ ಹೃದಯ ಪೂರ್ವವಕ ಅಭಿನಂದನೆ ಸಲ್ಲಿಸುತ್ತೇನೆ ಎಂದರು.

ಚಾಮರಾಜನಗರ ಲೋಕಸಭಾ ಕ್ಷೇತ್ರದ ಚುನಾವಣೆಯಲ್ಲಿ ತಿ.ನರಸೀಪುರ ವಿಧಾನ ಸಭಾ ಕ್ಷೇತ್ರದ ಮತದಾರರು ಹೆಚ್.ಸಿ.ಮಹದೇವಪ್ಪ ಸಚಿವರಾಗಿದ್ದರು ಸಹ ಎಸ್. ಬಾಲರಾಜು ರವರಿಗೆ ಅತಿ.ಹೆಚ್ಚು ಮತ ನೀಡಿದ್ದಾರೆ ಅಲ್ಲದೆ ಎನ್.ಡಿ.ಎ. ಕಾರ್ಯಕರ್ತರು ಸಹ ಅಷ್ಟೇ ಶ್ರಮ ಹಾಕಿದ್ದಾರೆ ಅವರೆಲ್ಲರಿಗೂ ಎಷ್ಟು ಕೃತಜ್ಞತೆ ಹೇಳಿದರು ಕಡಿಮೆ ಎಂದರು.



ಮುಂದುವರಿದ ಮಾತಾಡಿದ ಎಂ.ಅಶ್ವಿನ್ ಕುಮಾರ್ ಪದವೀಧರ ಶಿಕ್ಷಕರ ಕ್ಷೇತ್ರ ಅಭ್ಯರ್ಥಿ ವಿವೇಕನಂದ ರವರ ಗೆಲುವಿನಲ್ಲೂ ಸಹ ತಾಲ್ಲೂಕಿನ ಪ್ರಬುದ್ಧ ಶಿಕ್ಷಕ ಮತದಾರರು ಅತಿ ಹೆಚ್ಚು ಮತ ನೀಡಿ ಅವರ ಗೆಲುವಿಗೆ ಕಾರಣರಾಗಿದ್ದಾರೆ ಹಾಗಾಗಿ ಶಿಕ್ಷಕ ಮತದಾರರಿಗೂ ತುಂಬು ಹೃದಯದ ಅಭಿನಂದನೆಗಳನ್ನ ಸಲ್ಲಿಸುತ್ತೇನೆ ಹಾಗೆ ಸಂಸತ್ ಚುನಾವಣೆಯಲ್ಲಿ ಎಸ್.ಬಾಲರಾಜು ಕುಗ್ಗದೆ ಜನರ ಮಧ್ಯ ಇದ್ದು ಕೆಲಸ ಮಾಡಬೇಕು ಎಂದರು. ನೂತನ ಸಂಸದ ಸುನಿಲ್ ಬೋಸ್‌ಗೆ ಅಭಿನಂದನೆ ಸಲ್ಲಿಸಿ ಮಾತನಾಡಿದ ಬಿಜೆಪಿ ಮುಖಂಡ ಡಾ.ಎಂ ರೇವಣ್ಣ

ಮತದಾರರ ತೀರ್ಪನ್ನ ಒಪ್ಪಿಕೊಳ್ಳಬೇಕು, ಚಾಮರಾಜನಗರ ಗಡಿ ನಾಡು ಪ್ರದೇಶವಾಗಿದ್ದು ತೀರ ಹಿಂದುಳಿದಿದೆ ಸಂಸದ ಸುನಿಲ್ ಬೋಸ್ ನಂಜುಂಡಪ್ಪ ವರದಿ ಅನುಸಾರ ಚಾಮರಾಜನಗರ ಅಭಿವೃದ್ಧಿಗೆ ಹೆಚ್ಚು ಒತ್ತು ಕೂಡಬೇಕು ಉದ್ಯೋಗ,ಕೃಷಿ. ಕೈಗಾರಿಕೆ, ಶಿಕ್ಷಣ ಕ್ಷೇತ್ರವನ್ನು ಅಭಿವೃದ್ಧಿ ಪಡಿಸಿ ಚಾಮರಾಜನಗರ ಲೋಕಸಭಾ ಕ್ಷೇತ್ರವನ್ನ ಮಾದರಿಯಾಗಿ ಅಭಿವೃದ್ಧಿ ಪಡಿಸಬೇಕು ಎಂದು ಸಲಹೆ ನೀಡಿದರು.ಹಾಗೂ ಸಂಸತ್ ಹಾಗೂ ಶಿಕ್ಷಕರ ಕ್ಷೇತ್ರದ ಚುನಾವಣೆಯಲ್ಲಿ ಎನ್.ಡಿ.ಎ ಮೈತ್ರಿ ಕೂಟದ ಅಭ್ಯರ್ಥಿ ಗಳ ಪರವಾಗಿ ನಿಂತು ಕೆಲಸ ಮಾಡಿದ ಎಲ್ಲರಿಗೂ ಧನ್ಯವಾದ ಅರ್ಪಿಸುತ್ತೇನೆ ಎಂದರು.

"ಚಾಮರಾಜನಗರ ಲೋಕಸಭಾ ಕ್ಷೇತ್ರವನ್ನು ಮಾಜಿ ಸಂಸದರಾದ ವಿ.ಶ್ರೀನಿವಾಸ್ ಪ್ರಸಾದ್ ಹಾಗೂ ಆರ್.ಧ್ರುವ ನಾರಾಯಣ್ ಪ್ರತಿನಿದಿಸುತ್ತಿದ್ದ ಕ್ಷೇತ್ರ ಇಬ್ಬರು ನಾಯಕರು ಜಾತಿ ಧರ್ಮ ಮೀರಿ, ಪಕ್ಷಾತೀತವಾಗಿ ಜನ ಪರವಾಗಿ ಕೆಲಸ ಮಾಡಿದವರು ಅಂತಹ ಮಹಾನ್ ನಾಯಕರು ಪ್ರತಿನಿಧಿಸುತ್ತಿದ್ದ ಕ್ಷೇತ್ರದಲ್ಲಿ ಸುನಿಲ್ ಬೋಸ್ ಜನರ ಆಶೀರ್ವಾದ ಪಡೆದು ಸಂಸದರಾಗಿದ್ದಾರೆ ಅವರಿಗೆ ಅಭಿನಂದನೆ ಸಲ್ಲಿಸುತ್ತೇನೆ ಹಾಗೆ ವಿ.ಶ್ರೀನಿವಾಸ್ ಪ್ರಸಾದ್, ಆರ್.ಧ್ರುವನಾರಾಯಣ್ ಅವರಂತೆಯೇ ಸುನಿಲ್ ಬೋಸ್ ಸಹ ದ್ವೇಷ ರಾಜಕಾರಣ ಮಾಡದೆ ಜನಪರ ಕೆಲಸ ಮಾಡಲಿ"

– ಎಂ.ಅಶ್ವಿನ್ ಕುಮಾರ್ ,ನಿಕಟ ಪೂರ್ವ ಶಾಸಕರು.

ಪತ್ರಿಕಾ ಗೋಷ್ಠಿಯಲ್ಲಿ ಜೆಡಿಎಸ್ ಕ್ಷೇತ್ರಾಧ್ಯಕ್ಷ ಸಿ. ಬಿ. ಹುಂಡಿ ಚಿನ್ನಸ್ವಾಮಿ, ಬಿಜೆಪಿ ಮಂಡಲ ಅಧ್ಯಕ್ಷ ಶಿವಕುಮಾರ್ (ಸತ್ಯರಾಜು ), ಪ್ರಧಾನ ಕಾರ್ಯದರ್ಶಿ ಡಾ. ಮಲ್ಲಿಕಾರ್ಜುನ ಸ್ವಾಮಿ, ಬಿಜೆಪಿ ಹಿರಿಯ ಮುಖಂಡ ಕರೋಹಟ್ಟಿ ಮಹದೇವಯ್ಯ, ಎಸ್. ಎಂ. ಆರ್. ಪ್ರಕಾಶ್,ಪುರಸಭೆ ಮಾಜಿ ಸದಸ್ಯ ಲೋಕೇಶ್, ಸಿದ್ದರಾಜು, ಜೆಡಿಎಸ್ ರಾಜ್ಯ ಕಾರ್ಯದರ್ಶಿ ರಾಮಸ್ವಾಮಿ, ಬನ್ನೂರು ಹೋಬಳಿ ಅಧ್ಯಕ್ಷ ಕುಮಾರಸ್ವಾಮಿ, ಜಿ. ಪಂ. ಮಾಜಿ ಸದಸ್ಯ ಜಯಪಾಲ್ ಭರಣಿ, ಕು. ಸಿ.ಬೃಂಗೇಶ್, ತಿರುಮಕೂಡಲು ಜಯರಾಮು,ಮೇಗಡಹಳ್ಳಿ ದ್ವಾರಕೀಶ್ ,ಮಹದೇವಯ್ಯ ಸೇರಿದಂತೆ ಮತ್ತಿತರರು ಹಾಜರಿದ್ದರು.

## ರಂಗಭೂಮಿ ಹೆಸರಲ್ಲೆ ಹೆಣ್ಣಿನ ಹೆಸರಿದೆ–ನಟರಾಜ್ ಹೊನ್ನವಳ್ಳಿ



ರಂಗಭೂಮಿ ಎನ್ನುವ ಪದದಲ್ಲಿ ಭೂಮಿ ಎನ್ನುವ ಪದವಿದೆ. ಭೂಮಿ ಎಂದರೆ ಹೆಣ್ಣು,ಫಲವತ್ತತೆ. ಹೀಗಾಗಿ ಹೆಣ್ಣು ರಂಗಭೂಮಿಯ ಅವಿಭಾಜ್ಯ ಅಗವೆಂದು ಖ್ಯಾತ ರಂಗ ನಿರ್ದೇಶಕ ನಟರಾಜ್ ಹೊನ್ನವಳ್ಳಿ ಅಭಿಪ್ರಾಯ ಪಟ್ಟರು.

ಇವರು ಇಲ್ಲಿನ ಇಂದಿರಾಗಾಂಧಿ ಮಹಿಳಾ ಕಾಲೇಜು ಮತ್ತು ಡಿಜಿಟಲ್ ಮೀಡಿಯಾ ಪ್ರೆಸ್ ಕ್ಲಬ್ ಜೂನ್ 25 ರಂದು ಜಂಟಿಯಾಗಿ ಆಯೋಜಿದ್ದ ರಂಗಭೂಮಿ ಮತ್ತು ಮಹಿಳೆ ಎಂಬ ವಿಶೇಷ ಉಪನ್ಯಾಸ ನೀಡುತ್ತಾ ಹೇಳಿದರು

ಗಂಡಾಳ್ವಿಕೆಯ ನೆಲೆಯಲ್ಲಿ ರಂಗಭೂಮಿ ರಂಗಭೂಮಿ ಚಟವಟಿಕೆ ನಡೆಯುತ್ತಿದ ಕಾಲಘಟ್ಟದಲ್ಲಿ ಹಲವು ಮಹಿಳಾ ಹೋರಾಟಗಾರರು,ಬರಹಗಾರರು ಸೌಂದರ್ಯ ಸ್ಪರ್ದೆಯ ಸಮಯದಲ್ಲಿ ಸಿಡಿದು ವಿರೋಧಿಸಿದರು.

ರಂಗಭೂಮಿ ಸಾಹಿತ್ಯ,ಪ್ರದರ್ಶನ ಮತ್ತು ತಾಂತ್ರಿಕ ಅಂಶವನ್ನು ಒಳಗೊಂಡಿರುತ್ತದೆ. ಇಲ್ಲಿ ಆಡುಔರು ನೋಡುವವರು ಇರಬೇಕು. ಕೆಲವು ಮನುಷ್ಯರು ಹಲವು ಮನುಷ್ಯರ ಜೊತೆಗೆ ಮನುಷ್ಯರ ಕಥೆಗಳನ್ನ ಹೇಳುತ್ತಾರೆ ಎಂದ ಇವರು ರಂಗಭೂಮಿ ಜಗತ್ತಿನ ಎಲ್ಲ ಅವಸ್ಥೆಗಳನ್ನು ನೋಡಲು ಇರುವ ಒಂದು ಜಾತ್ಯಾತೀತ ಸ್ಪೇಸ್ .ನಾಲ್ಕು ವೇದಗಳು ಜನ ಸಮಾನ್ಯರಿಗೆ ಅರ್ಥವಾಗದೆ ಇರುವ ಕಾರಣಕ್ಕೆ ನಾಟ್ಯವೇದದ ಹುಟ್ಟಿಗೆ ಕಾರಣವಾಯಿತು. ಇದರಲ್ಲಿ ಮಹಿಳೆಗೆ ಪ್ರಮುಖ ಪಾತ್ರವಿದೆ ಎಂದರು. ಭರತನ ನಾಟ್ಯಶಾಸ್ತ್ರ ಚಲಿಸುತ್ತಿರು ಪಠ್ಯ. ಆದರೆ ವಿದೇಶದಲ್ಲಿ ಹದಿನಾರನೇ ಶತಮಾನದಲ್ಲಿ ಮಹಿಳೆ ವೇದಿಕೆಯಲ್ಲಿ ಅಭಿವ್ಯಕ್ತಿಸಲು ಸಾಧ್ಯವಾಯಿತು. ಭೀಕರ ಯುದ್ದಗಳನ್ನು ನಿಲ್ಲಿಸುವ ಸಾಮರ್ಥ್ಯ ಮಹಿಳೆಯರಿಗೆ ಇದೆ ಎಂದ ಇವರು ಹೆಣ್ಣನ್ನು ಆಸ್ತಿಯಂತೆ ನೋಡುತ್ತಿದ ಗಂಡು ಸಮಾಜ ರಂಗಭೂಯಲ್ಲೂ ಇದೆ ಕೆಲಸ ಮಾಡಿಕೊಂಡು ಬಂದಿದೆ.

ಈ ಸಮಾಜದಲ್ಲಿ ಹಲವು ಬಗೆಯ ಶೆಡ್ಡಗಳು ಇವೆ. ಕೆಲವು ಶೆಡ್ಡಗಳಲ್ಲಿ ಕೊಲೆಗಳು ನಡೆಯುತ್ತವೆ. ಇನ್ನು ದಲಿತರು,ಆಧಿವಾಸಿಗಳು ಅಲ್ಪಸಂಖ್ಯಾತರು ಮಹಿಳೆಯರನ್ನು ಶೋಷಿಸುವ ಶೆಡ್ಡುಗಳು ಇವೆ ಎಂದ ಇವರು ಹೋರಾಟದ ಮೂಲಕ ಈ ಶೇಡ್ಡಗಳನ್ನು ಕಿತ್ತಾಕಬೇಕು ಎಂದರು. ಹಲವು ನಾಟಕಗಳನ್ನು ಉದಾರಿಸಿ ಮಾತನಾಡಿದ ಇವರು ಜಗತ್ತಿನಲ್ಲಿ ಸಣ್ಣ ಸಣ್ಣ ವಿಷಯಗಳಿಗೆ ದೊಡ್ಡ ದೊಡ್ಡ ದುರಂತಗಳು ನಡೆದಿವೆ ಎಂದರು.

ಡಿಜಿಟಲ್ ಮೀಡಿಯಾ ಅಧ್ಯಕ್ಷ ಎಚ್.ಬಿ. ರಾಘವೇಂದ್ರ ಮಾತನಾಡಿ ಅಂಚಿಗೆ ಸರಿಸಲ್ಪಟ್ಟ ಮಹಿಳಾ ವಿಚಾರಗಳನ್ನು ಹಲವು ನಾಟಕಕಾರರು ಮತ್ತು ಬರಹಗಾರರು ಮುನ್ನಲೆಗೆ ತಂದು ಬಿಡುಗಡೆಯ ಮಾರ್ಗ ತೋರಿದರು ಎಂದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಪ್ರಾಂಶುಪಾಲರಾದ ಡಾ. ಎಚ್. ರಾಜೇಶ್ವರಿಯವರು ಇಂದು ಹಲವು ಕ್ಷೇತ್ರಗಳಲ್ಲಿ ಸಾಧನೆ ಮಾಡಲು ಅಗಾಧವಾದ ಅವಕಾಶವಿದೆ. ಬಳಸಿಕೊಂಡು ಸಾಧನೆ ಮಾಡಬೇಕು ಎಂದರು.

ಡಿಎಂಪಿಸಿ ಕಾರ್ಯದರ್ಶಿ ರಾಘವೇಂದ್ರ ತಾಳಗುಪ್ಪ ಸ್ವಾಗತಿಸಿದರು,ಇಂಗ್ಲಿಷ್ ವಿಭಾಗದ ಮುಖ್ಯಸ್ಥ ಮಾರುತಿಗೌಡ ಪ್ರಸ್ತಾವಿಕ ಮಾತುಗಳನ್ನಜ ಆಡಿದರು. ಕನ್ನಡ ವಿಭಾಗದ ಮುಖ್ಯಸ್ಥ ರಾಜು ವಂದಿಸಿದರು ಕು.ನೇಹಾ ಮತ್ತು ವಸಂಮತ್ ಕುಗ್ವೆ ರಂಗಗೀತೆಗಳನ್ನು ಆಡಿದರು. ಕು. ಸಿಂಚನ ನಿರೂಪಿಸಿದರು

ವರದಿ: ರಾಘವೇಂದ್ರ ತಾಳಗುಪ್ಪ

## ತಾಲ್ಲೂಕು ಮಟ್ಟದ ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡ ಆಡಳಿತಾಧಿಕಾರಿ: ಫಡ್ನೇಕರ್

ಯಳಂದೂರು ಪಟ್ಟಣದ ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ನಡೆದ ತಾಲ್ಲೂಕು ಮಟ್ಟದ ಅಧಿಕಾರಿಗಳ ಸಾಮಾನ್ಯ ಸಭೆಯು ಶ್ರೀ ಕಿರಣ್ ರಾಯ್ ಫಡ್ನೇಕರ್ ರವರ ಸಮ್ಮುಖದಲ್ಲಿ ನಡೆಯಿತು

ಈ ಸಭೆಯಲ್ಲಿ ಸರ್ಕಾರದಿಂದ ಬಿಡುಗಡೆಯಾದ ಅನುದಾನವನ್ನು ಇಲಾಖಾವಾರು ಖರ್ಚು ವೆಚ್ಚಗಳ ಬಗ್ಗೆ ಮಾಹಿತಿ ಪಡೆದು ಕೊಂಡರು ಕೆಲವು ಇಲಾಖೆಯ ಅಧಿಕಾರಿಗಳು ಗೈರಾದ ಹಿನ್ನೆಲೆಯಲ್ಲಿ ತರಾಟೆ ತೆಗೆದುಕೊಂಡು ನೋಟಿಸ್ ಜಾರಿ ಮಾಡುವಂತೆ ತಿಳಿಸಿದರು. ಈ ಸಂದರ್ಭದಲ್ಲಿ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಆರ್ ಉಮೇಶ್.ಪ್ರಭುಸ್ವಾಮಿ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು ಇದ್ದರು.

ವರದಿ: ಆರ್ ಉಮೇಶ್ ಮಲಾರಪಾಳ್ಯ



## ಉಚಿತ ಕಣ್ಣಿನ ಪರೀಕ್ಷೆ ಹಾಗೂ ಆರೋಗ್ಯ ಶಿಬಿರ

ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಹಾಗೂ ಐ ದೃಷ್ಟಿ ಕಣ್ಣಿನ ಹಾಸ್ಪಿಟಲ್ ಇವರ ಸಂಯುಕ್ತ ಆಶ್ರಯದಲ್ಲಿ ಸಾಗರದ ತ್ಯಾಗರ್ತಿ ಗ್ರಾಮದಲ್ಲಿ ಉಚಿತ ಕಣ್ಣಿನ ಪರೀಕ್ಷೆ ಹಾಗೂ ಆರೋಗ್ಯ ಶಿಬಿರ ಏರ್ಪಡಿಸಲಾಗಿತ್ತು.

ಈ ಕಾರ್ಯಕ್ರಮದ ಉದ್ಘಾಟನೆಯನ್ನು ತ್ಯಾಗರ್ತಿ ಶಾಲೆಯ ಮುಖ್ಯ ಶಿಕ್ಷಕರಾದ ತಿಮ್ಮಪ್ಪ ಮಾಡಿದರು ನಂತರ ಅವರು ಗ್ರಾಮಸ್ಥರನ್ನು ಕುರಿತು ಈ ಶಿಬಿರವನ್ನು ಜನರು ಸದುಪಯೋಗ ಪಡೆದುಕೊಳ್ಳಬೇಕು ಈ ಸಂಘವು ಮಾಡುವ ಈ ಒಳ್ಳೆಯ ಕೆಲಸಕ್ಕೆ ನಾವೆಲ್ಲರೂ ಸಹಕಾರ



ನೀಡಬೇಕು ಹಾಗೆಯೆ ಆರೋಗ್ಯದ ಕಡೆ ಹೆಚ್ಚಿನ ಗಮನ ಹರಿಸಬೇಕು ಎಂದರು.

ತಾಲ್ಲೂಕು ಯೋಜಾನಾಧಿಕಾರಿ ಶಾಂತಾನಾಯ್ಕ ಅವರು ಮಾತಾನಾಡುತ್ತ ಶ್ರೀ ಕ್ಷೇತ್ರವು ಪ್ರತಿ ವರ್ಷ ಇ ತರಹದ ಅನೇಕ ಕಾರ್ಯಕ್ರಮಗಳನ್ನು ಆಯೋಜಿಸುತ್ತಾ ಬಂದಿದೆ ನಾವೆಲ್ಲರೂ ಕೆಲಸಗಳ ಒತ್ತಡದಲ್ಲಿ ನಮ್ಮ ಆರೋಗ್ಯ ಕಡೆ ಗಮನ ಹರಿಸುವುದು ಕಸ್ಟವಾಗಿದೆ ಆದರು ನಾವೆಲ್ಲರೂ ಆರೋಗ್ಯ ಕಡೆಗೆ ಹೆಚ್ಚಿನ ಗಮನಕೊಡಬೇಕಾಗಿದೆ ಯಾವುದೇ ಕಾಯಿಲೆ ಬಂದರೆ ಸುರುವಿನಲ್ಲೆ ನಾವು ಜಾಗರೂಕರಾಗಿ ಹಾಸ್ಪಿಟಲ್ ಹೋಗಿ ತಪಾಸಣೆ ಮಾಡಿಸಿದರೆ ಬೇಗ ಕಮ್ಮಿ ಆಗುತ್ತದೆ ಇಲ್ಲ ಹೆಚ್ಚಾದಮೇಲೆ ಹೊದರೆ ಎನು ಪ್ರಯೋಜನ ನಮ್ಮ ನಮ್ಮ ಮನೆಯ ಸುತ್ತಾ ಕ್ಲೀನ್ ಇಡಬೇಕು ಎಂದು ಗ್ರಾಮಸ್ಥರಿಗೆ ಮನವರಿಕೆ ಮಾಡಿದರು..

ಅತಿಥಿಯಾಗಿ ಪತ್ರಕರ್ತ ರಾಘವೇಂದ್ರ ತಾಳಗುಪ್ಪ ಮಾತನಾಡಿ. ರಾಜ್ಯದಲ್ಲಿ ಹಲವು ಸಂಘಗಳು ಇದ್ದರು ಶ್ರೀ ಕ್ಷೇತ್ರ ಧರ್ಮಸ್ಥಳ ಸಂಘ ಮಾತ್ರ. ಸಾಲ ಕೊಡುವುದಲ್ಲದೆ ಇ ತರಹದ ಸಾಮಾಜಿಕ .ಆರೋಗ್ಯ. ವಿದ್ಯೆ .ಪರಿಸರ ವಿಚಾರವಾಗಿ ಕೆಲಸ ಮಾಡುತ್ತಾ ಬಂದಿದೆ ಮಹಿಳೆಯರು ಮನೆಯಲ್ಲಿ ಹೆಚ್ಚಿನ ಆರೋಗ್ಯ ಕಡೆ ಗಮನ ಕೊಟ್ಟು ಬಿಸಿ ನೀರು ಹಣ್ಣು ತರಕಾರಿಗಳನ್ನು ಹೆಚ್ಚು ಉಪಯೋಗಿಸಬೇಕು ಯಾವುದೇ ಕಾಯಿಲೆ ಬಂದರು ಇವಾಗಿನ ಎಲ್ಲಾ ಹಾಸ್ಪಿಟಲ್ ನಲ್ಲು ಕೂಡಾ ಅತ್ಯಾಧುನಿಕ ತಂತ್ರಜ್ಞಾನ ಇದೆ ಯಾವುದಕ್ಕು ಹೆದರದೆ ತಾಳ್ಮೆಯಿಂದ ಇದ್ದು ಅನಾರೋಗ್ಯ ಎದುರಿಸಬೇಕಾಗಿದೆ ಎಂದರು... ವೇದಿಕೆಯಲ್ಲಿ ಹಾಸ್ಪತ್ರೆಯ ಮಂಜುನಾಥ ..ಆಶಾ.ವಸಂತ ನೀಚಡಿ ಪತ್ರಕರ್ತರು .ವಲಯ ಮೇಲ್ವಿಚಾರಕರು ಸಮನ್ವಯ ಅಧಿಕಾರಿಗಳು.ಹಾಗೂ ಗ್ರಾಮಸ್ಥರು ಹಾಜರಿದ್ದರು...

ಸ್ವಾಗತ ಕೃಷ್ಣಮೂರ್ತಿ ಅವರು ಮಾಡಿದರು. ಪ್ರಸಾವಿಕ.ತಿಮ್ಮಪ್ಪ. ನಿರೂಪಣೆಯನ್ನು ಧರ್ಮಪ್ಪ ಮಾಡಿದರು.....

## ಗ್ರಾಮೀಣ ಪ್ರದೇಶದ ಅಲ್ಲಲ್ಲಿ ಕೆಲವೊಮ್ಮೆ ಬಿರುಸಾದ ಮಳೆ

ಸಾಗರ ತಾಲೂಕಿನಲ್ಲಿ ಮುಂಗಾರು ನಿಧಾನವಾಗಿ ಅಬ್ಬರ ಪಡೆದುಕೊಳ್ಳುತ್ತಿದೆ. ಕಳೆದ ಎರಡು ಮೂರು ದಿನಗಳಿಂದ ಮೋಡ ಕಟ್ಟಿದ ವಾತಾವರಣ ಸಣ್ಣ ಪ್ರಮಾಣದಲ್ಲಿ ಸುರಿದಿದ್ದ



ಮಳೆ ಬಿರುಸು ಪಡೆದುಕೊಂಡಿದೆ. ಗ್ರಾಮೀಣ ಪ್ರದೇಶದ ಅಲ್ಲಲ್ಲಿ ಕೆಲವೊಮ್ಮೆ ಬಿರುಸಾದ ಮಳೆ ಬರುತ್ತಿದೆ. ಜೂನ್ ತಿಂಗಳಲ್ಲಿ ವಾಡಿಕೆಗಿಂತ ಸ್ವಲ್ಪ ಕಡಿಮೆ ಪ್ರಮಾಣದಲ್ಲಿ ಮಳೆಯಾಗಿದ್ದು, ಕಳೆದ ಮೂರು ದಿನಗಳಿಂದ ಮುಂಗಾರು ವೇಗ ಪಡೆದುಕೊಂಡಿದೆ. ಗ್ರಾಮಾಂತರ ಭಾಗದಲ್ಲಿ ಮಳೆ, ಗಾಳಿಗೆ ವಿದ್ಯುತ್ ವ್ಯತ್ಯಯವಾಗಿದೆ. ಕೆಲವೊಮ್ಮೆ ಬೀಸುವ ಬಿರುಸಾದ ಗಾಳಿಗೆ ಹಲವೆಡೆ ಮರ ಮುರಿದು ಬೀಳುವ ಘಟನೆಗಳು ತಿಳಿದುಬಂದಿದೆ. ಅಡಕೆಗೆ ಬೋರ್ಡೋ ದ್ರಾವಣ ಸಿಂಪಡಿಸುವ ಕಾಲವಾಗಿದ್ದು, ಮಳೆ ಸುರಿಯುತ್ತಿರುವುದರಿಂದ ಬೆಳೆಗಾರರಿಗೆ ತೊಂದರೆಯಾಗುತ್ತಿದೆ. ಭತ್ತ ಸೇರಿದಂತೆ ಇತರ ಕೃಷಿ ಚಟುವಟಿಕೆಗಳಿಗೆ ಮಳೆ ಪ್ರಮಾಣ ಸಹಕಾರಿಯಾಗಿದೆ.

ಪಟ್ಟಣ ವ್ಯಾಪ್ತಿಯಲ್ಲಿ ಮಳೆಯಿಂದಾಗಿ ಯಾವುದೇ ಅನಾಹುತ ಸಂಭವಿಸಿಲ್ಲ ಎಂದು ನಗರ ಸಭೆ ಅಧಿಕಾರಿಗಳು ತಿಳಿಸಿದ್ದಾರೆ. ಜತೆಯಲ್ಲಿ ಚರಂಡಿ, ಮೋರಿಗಳ ಸ್ವಚ್ಛತೆಗೆ ಅಧಿಕಾರಿಗಳು ಕ್ರಮ ತೆಗೆದುಕೊಂಡಿದ್ದಾರೆ.

ಮನೆ ಮೇಲೆ ಬಿದ್ದ ಮರ : ತಾಲೂಕಿನ ಭೀಮನೇರಿ ಗ್ರಾಮದ ಸುರೇಶ್‌ರವರ ಮನೆಯ ಮೇಲೆ ಮಂಗಳವಾರ ರಾತ್ರಿ ಸುರಿದ ಅಬ್ಬರದ ಗಾಳಿ ಮಳೆಯಿಂದಾಗಿ ಮರ ಮುರಿದು ಬಿದ್ದಿದೆ. ಮನೆಯಲ್ಲಿದ್ದ ಯಾರಿಗೂ ಯಾವುದೇ ಅಪಾಯಸಂಭವಿಸಿಲ್ಲ. ಮನೆಯ ಹಂಚುಗಳು ಒಡೆದು ಹೋಗಿವೆ. ಕಂದಾಯ ಇಲಾಖೆ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

## ತೈಲ ದರ ಏರಿಕೆ ಖಂಡಿಸಿ ಬಿಜೆಪಿ ಬೃಹತ್ ಪ್ರತಿಭಟನೆ

ಮುಂಜಾನೆ ವಾರ್ತೆ ಸುದ್ದಿ ತಾಳಿಕೋಟಿ: ಪಟ್ಟಣದಲ್ಲಿ ಪೆಟ್ರೋಲ್ ಡೀಸೆಲ್ ಬೆಲೆ ಏರಿಕೆ ಮಾಡಿರುವ ರಾಜ್ಯ ಸರ್ಕಾರದ ಕ್ರಮವನ್ನು ಖಂಡಿಸಿ ಬಿಜೆಪಿ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು. ಬುಧವಾರ ಪಟ್ಟಣದ ಶ್ರೀ ಬಸವೇಶ್ವರ ವೃತ್ತದಲ್ಲಿ ಜಮಾಯಿಸಿದ ಪ್ರತಿಭಟನಾಕಾರರು ಕೆಲಹೊತ್ತು ರಸ್ತೆ ಸಂಚಾರ ಸ್ಥಗಿತಗೊಳಿಸಿ ಟೈಯರ್‌ಗೆ ಬೆಂಕಿ ಹಚ್ಚಿ ಇಂಧನ ದರ ಏರಿಕೆ ಮೂಲಕ ರಾಜ್ಯ ಸರ್ಕಾರ ಜನವಿರೋಧಿ ನಡೆ ಅನುಸರಿಸುತ್ತಿದೆ ಎಂದು ಧಿಕ್ಕಾರ ಕೂಗಿ ತೀವ್ರ ಆಕ್ರೋಶ ವ್ಯಕ್ತಪಡಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಪಕ್ಷದ ಮುಖಂಡ ಶಿವಶಂಕರ ಹಿರೇಮಠ ಅವರು ಕಾಂಗ್ರೆಸ್ ಸರ್ಕಾರ ಜಾರಿಗೆ ತಂದಿರುವ ಗ್ಯಾರಂಟಿ ಯೋಜನೆಗಳಿಗೆ ಹಣದೂಗಿಸಲು ಸಾಧ್ಯವಾಗದೇ ಈಗ ತೈಲ ಬೆಲೆಗಳನ್ನು ಹೆಚ್ಚಿಸಿ ಜನಸಾಮಾನ್ಯರಿಗೆ ತೊಂದರೆ ಕೊಡುತ್ತಿದೆ. ಇದೊಂದು ಜನ ವಿರೋಧಿ ಸರ್ಕಾರ ಇವರಿಗೆ ಅಧಿಕಾರದಲ್ಲಿ ಮುಂದುವರೆಯುವ ನೈತಿಕತೆ ಇಲ್ಲ. ಸುಳ್ಳು ಭರವಸೆ ಯೋಜನೆಗಳನ್ನು ಪೂರೈಸಲಾಗದೆ ರಾಜ್ಯದ ಖಜಾನೆಯನ್ನು ಖಾಲಿ ಮಾಡಿಕೊಂಡಿರುವ ಈ ಸರ್ಕಾರ ಜನರ ಕಲ್ಯಾಣವನ್ನು ಮರೆತಿದೆ. ಕೂಡಲೇ ತೈಲ ದರಗಳನ್ನು ಕಡಿತಗೊಳಿಸಿ ಈ ಕೆಟ್ಟ ನಿರ್ಧಾರವನ್ನು ಹಿಂಪಡೆಯಬೇಕು ಎಂದು ಒತ್ತಾಯಿಸಿದರು. ನ್ಯಾಯವಾದಿ ಗಂಗಾಧರ ಕಸ್ತೂರಿ ಮಾತನಾಡಿ ಈ ಸರ್ಕಾರವು ಕೆಲವು ವಸ್ತುಗಳ ಮೇಲಿನ ದರಗಳನ್ನು ಹೆಚ್ಚಿಸುವುದರ ಮೂಲಕ ಜನಸಾಮಾನ್ಯರ ಬದುಕಿನೊಂದಿಗೆ ಚೆಲ್ಲಾಟವಾಡುತ್ತಿದೆ.




ತೈಲಬೆಲೆ ಏರಿಸಿರುವುದರಿಂದ ದಿನನಿತ್ಯದ ಅಗತ್ಯ ವಸ್ತುಗಳು ಬೆಲೆಗಳು ಹೆಚ್ಚಾಗಿವೆ ಇದು ಬಡ ಜನರನ್ನು ಸಂಕಷ್ಟಕ್ಕೆ ಸಿಲುಕಿಸಿದೆ. ಈ ಕೂಡಲೇ ಸರ್ಕಾರ ತನ್ನ ನಿರ್ಧಾರವನ್ನು ಪರಾಮರ್ಶಿಸಿ ತೆರಿಗೆ ದರವನ್ನು ಕಡಿತಗೊಳಿಸಬೇಕು. ಬಿಜೆಪಿ ಸರ್ಕಾರವನ್ನು 40% ಸರ್ಕಾರವೆಂದು ಕರೆದ ಇವರು ಇವತ್ತು ಬ್ರಹ್ಮಾಂಡ ಭ್ರಷ್ಟಾಚಾರದಲ್ಲಿ ಮುಳಗಿದ್ದಾರೆ ಇದೊಂದುಕೆಟ್ಟ ಸರ್ಕಾರವಾಗಿದ್ದು ಆದಷ್ಟು ಬೇಗ ತೊಲಗಬೇಕಾಗಿದೆ ಎಂದರು.

ಪ್ರತಿಭಟನೆಯಲ್ಲಿ ಪಕ್ಷದ ಪ್ರಮುಖರಾದ ವಾಸುದೇವ ಹೆಬಸೂರ.ಶಶಿಧರ ಡಿಸಲೆ. ಪ್ರಕಾಶ ಹಜೇರಿ. ರಾಘವೇಂದ್ರ ಚೌವಾಣ. ಮಂಜುನಾಥ್ ಶೆಟ್ಟಿ. ಮಾನಸಿಂಗ ಕೊಕಟನೂರ. ಶಿವಮ್ಮ ಬಿರಾದಾರ.

ಮಹಾಂತೇಶ ಮುರಾಳ. ಜೈಸಿಂಗ್ ಮೂಲಿಮನಿ. ಮುದುಕಪ್ಪ ಬಡಿಗೇರ. ರಾಜು ಸಜ್ಜನ. ದ್ಯಾಮನಗೌಡ ಪಾಟೀಲ. ಶರಣಗೌಡ ಗೊಟ ಖಂಡಕಿ. ವಿಠಲ ಮೋಹಿತೆ. ರವಿ ಕಟ್ಟಿಮನಿ. ರಾಘು ಮಾನೆ. ಸಂತೋಷ ಹಜೇರಿ. ನಾಗರಾಜ ಬಳಿಗಾರ. ಪ್ರಕಾಶ ಪಾಟೀಲ. ಪ್ರಭು ಬಿಳೆಬಾವಿ. ಮಂಜು ಮೈಲೇಶ್ವರ. ನದೀಮ ಕಡು. ಪ್ರಕಾಶ ಪಾಟೀಲ. ಕಿರಣ ಬಡಿಗೇರ ಸೇರಿದಂತೆ ಮತ್ತಿತರರು ಭಾಗವಹಿಸಿದ್ದರು.

ವರದಿ: ಸುನೀಲ್.ಎಲ್ ತಳವಾರ
ಮುಂಜಾನೆವಾರ್ತೆ ತಾಳಿಕೋಟಿ

## ಸರ್ಕಾರದ ನಂದಿನಿ ಹಾಲಿನ ಲೆಕ್ಕಾಚಾರ ಏನು?

ನಂದಿನಿ ಹಾಲಿನ ಪ್ಯಾಕೆಟ್ 1,000 ಮಿ.ಲೀಗೆ 42 ರೂಪಾಯಿ ಇತ್ತು, 500 ಮಿಲಿ ಲೀಟರ್ ಹಾಲಿಗೆ 22 ರೂಪಾಯಿ ಬೆಲೆ ಇತ್ತು.




ಆದರೆ ಇದೀಗ 1 ಲೀಟರ್ ಬದಲು 1,050 ಮಿಲಿ ಲೀಟರ್ ಮತ್ತು 500 ಎಂಎಲ್ ಬದಲು 550 ಮಿಲಿ ಲೀಟರ್ ಪ್ಯಾಕೆಟ್ ಮಾರಾಟ ಮಾಡಲು ಕೆಎಂಎಫ್ ನಿರ್ಧರಿಸಿದೆ. ಹೀಗಾಗಿ ನಂದಿನಿ ಹಾಲಿನ 1,050 ಮಿಲಿ ಲೀಟರ್ ಪ್ಯಾಕೆಟ್‌ಗೆ 44 ರೂಪಾಯಿ & 550 ಮಿಲಿ ಲೀಟರ್ ಪ್ಯಾಕೆಟ್‌ಗೆ 24 ರೂಪಾಯಿ ಫಿಕ್ಸ್ ಮಾಡಲಾಗಿದೆ. ಇದೇ ಹಿನ್ನೆಲೆ ಬೆಂಕಿ ಹೊತ್ತಿದ್ದು, ಹಾಲಿನ ದರ ಏರಿಕೆ ಬೆನ್ನಲ್ಲೇ ಸಿದ್ದರಾಮಯ್ಯ ಸ್ಪಷ್ಟನೆ ಕೂಡ ನೀಡಿದ್ದಾರೆ.

Printed by : H.L.AMARANATH, Owned by: H.L.AMARANATH, Printed at : SREE MANJUNATHA ENTERPRISES No. 7, Tirugappa lane, Cottonpet cross, Cottonpet, Bangalore-560053.
Published at : No.97, 2nd Cross, Vivekanandanagar, Khadi Commission Layout, BSK 3rd Stage, Kathariguppe Main Road, Bengaluru-560085. Mobile: 9663122276 Editor : H.L.AMARANATH